# ಪರಿಶ್ರಮದಿಂದ ಯಶಸ್ವಿ ಜೀವನ ಕಟ್ಟಿಕೊಳ್ಳಿ: ಹೆಗಡೆ

**ಹಳಿಯಾಳ:** ವಿದ್ಯಾರ್ಥಿಗಳು ಸತತ ಪರಿಶ್ರಮ ಹಾಗೂ ಸಮರ್ಪಣಾ ಭಾವದಿಂದ ಯಶಸ್ವಿ ಜೀವನ ಕಟ್ಟಿಕೊಳ್ಳಬೇಕು ಎಂದು ಇನ್ಫೋಸಿಸ್ ಉಪಾಧ್ಯಕ್ಷರಾದ ವಿನಾಯಕ ಹೆಗಡೆ ಸಲಹೆ ನೀಡಿದರು.

ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡಿ, ವಿದ್ಯಾರ್ಥಿಗಳು ಉದ್ಯಮ ಕ್ಷೇತ್ರ ಬಯಸುವ ಕೌಶಲ್ಯವನ್ನು ಹೊಂದಿದಲ್ಲಿ ಅಪಾರ ಉದ್ಯೋಗವಕಾಶಗಳಿವೆ. ಔದ್ಯೋಗಿಕ ಜೀವನದಲ್ಲಿ ಸಂಪತ್ತು ಗಳಿಸುವುದರೊಂದಿಗೆ ಸಮಾಜಪಯೋಗಿ ಕಾರ್ಯಗಳಲ್ಲೂ ತಮ್ಮನ್ನು ತೊಡಗಿಸಿಕೊಳ್ಳಬೇಕೆಂದು ಸಲಹೆ ನೀಡಿದರು. ಹಸಿರಿನ ಪರಿಸರದಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ವಿಡಿಐಟಿ ಪರಿಶ್ರಮ ಶ್ಲಾಘನೀಯ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ, ಯಶಸ್ವಿ ಯುವ ಉದ್ಯಮಿ, ಬೆಂಗಳೂರಿನಲ್ಲಿ ಡೆಸಾಪೆಕ್ಸ್ ಸಂಸ್ಥೆಯನ್ನು ಮುನ್ನಡೆಸುತ್ತಿರುವ ಶ್ರೀನಿಧಿ ಹುನಗುಂದ ಮಾತನಾಡಿ, ತಮ್ಮ ಔದ್ಯಮಿಕ ಜೀವನದ ಕಿರುಚಿತ್ರಣ ನೀಡುತ್ತ ಯುವ ಇಂಜಿನಿಯರ್‌ಗಳನ್ನು ಹುರಿದುಂಬಿಸಿದರು.



ಕೆಎಲ್‌ಎಸ್‌ನ ಉಪಾಧ್ಯಕ್ಷ ಆರ್.ಬಿ.ಭಂಡಾರೆ, ಡಿ.ವಿ. ಕುಲಕರ್ಣಿ, ಕಾರ್ಯದರ್ಶಿ ಎಸ್.ವಿ. ಗಣಾಚಾರಿ ವೇದಿಕೆಯಲ್ಲಿದ್ದರು. ವಿನಾಯಕ ಲೋಕುರ್ ಸ್ವಾಗತಿಸಿದರು. ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ವಂದಿಸಿದರು.

ಇದೇ ವೇಳೆ ಕರ್ನಾಟಕ ಸರ್ಕಾರದ ವಿಶನ್ ಗ್ರೂಫ್ ಆನ್ ಸೈನ್ಸ್ ಟೆಕ್ನಾಲಜಿಯ 20 ಲಕ್ಷ ರೂಪಾಯಿ ಅನುದಾನದಲ್ಲಿ ತಯಾರಿಸಲಾದ ವೈಬ್ರೇಶನ್ ಪ್ರಯೋಗಾಲಯ ಉದ್ಘಾಟಿಸಲಾಯಿತು.

ಸ್ಪಿಕ್ ಮೇಕೆ ಸಾಂಸ್ಕೃತಿಕ ಘಟಕ ಉದ್ಘಾಟಿಸಲಾಯಿತು. ಶೈಕ್ಷಣಿಕ, ಸಂಶೋಧನೆ ಮತ್ತು ಕ್ರೀಡಾ ವಿಭಾಗದಲ್ಲಿ ಗಣನೀಯ ಸಾಧನೆ ಮಾಡಿದ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಹಾಗೂ ಪ್ರಾಧ್ಯಾಪಕರಿಗೆ ಪುರಸ್ಕರಿಸಲಾಯಿತು. ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಇದೇ ವೇಳೆ ಆಯೋಜಿಸಲಾಗಿತ್ತು.

# ಕೆಎಲ್ಎಸ್ ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ



ಕರಾವಳಿ ಮುಂಜಾವು ವರದಿ

**ಹಳಿಯಾಳ:** ವಿದ್ಯಾರ್ಥಿಗಳು ಸತತ ಪರಿಶ್ರಮ ಹಾಗು ಸಮರ್ಪಣಾ ಭಾವದಿಂದ ಯಶಸ್ವಿ ಜೀವನ ಹೊಂದುವಂತೆ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಕರೆ ನೀಡಿದರು.

ಅವರು ಪಟ್ಟಣದ ಕೆಎಲ್ಎಸ್ ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು

ವಿದ್ಯಾರ್ಥಿಗಳು ಉದ್ಯಮ ಕ್ಷೇತ್ರ ಬಯಸುವ ಕೌಶಲ್ಯವನ್ನು ಹೊಂದಿದಲ್ಲಿ ಅಪಾರ ಉದ್ಯೋಗವಕಾಶಗಳಿವೆ ಎಂದರು

ಹಚ್ಚ ಹಸಿರಿನ ಪರಿಸರದಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿ ರುವ ವಿಡಿಐಟಿಯ ಪರಿಶ್ರಮವನ್ನು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆಎಸ್ಎಲ್ ಸಂಸ್ಥೆಯ ಮುಖ್ಯಸ್ಥರಾದ ಪ್ರದೀಪ್ ಸಾವ್ಕಾರ್ ಕಳೆದ 20 ವರ್ಷಗಳಿಂದ ವಿ ಡಿ ಐಟಿಯು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡುತ್ತಿರುವುದು ಸಂತಸ ತಂದಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವೇದಿಕೆ ಮೇಲೆ ಕೆಎಲ್ಎಸ್‌ನ ಉಪಾಧ್ಯಕ್ಷರುಗಳಾದ ಆರ್. ಬಿ.ಭಂಡಾರೆ, ಡಿ. ವಿ. ಕುಲಕರ್ಣಿ, ಕಾರ್ಯದರ್ಶಿಗಳಾದ ಎಸ್. ವಿ. ಗಣಾಚಾರಿ ಉಪಸ್ಥಿತರಿದ್ದರು.

ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರಾದ ವಿನಾಯಕ ಲೋಕುರ್ ಸಭೀಕರನ್ನು ಸ್ವಾಗತಿಸಿದರು. ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ವಂದಿಸಿದರು.

### ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಸಲಹೆ

# ಸಾಮಾಜಿಕ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಿ

■ ವಿಜಯವಾಣಿ ಸುದ್ದಿಜಾಲ ಹಳಿಯಾಳ

ಯುವ ಸಮೂಹ ಔದ್ಯೋಗಿಕ ಜೀವನದಲ್ಲಿ ಸಂಪತ್ತನ್ನು ಗಳಿಸುವುದರೊಂದಿಗೆ ಸಮಾಜ ಉಪಯೋಗಿ ಕಾರ್ಯಗಳಲ್ಲೂ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಹೇಳಿದರು.

ಪಟ್ಟಣದ ಕೆಎಲ್ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಶನಿವಾರ ಆಯೋಜಿಸಿದ್ದ ಸಂಸ್ಥಾಪನಾ ದಿನಾಚರಣೆಯಲ್ಲಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ಉದ್ಯಮ ಕ್ಷೇತ್ರ ಬಯಸುವ ಕೌಶಲವನ್ನು ಹೊಂದಿದಲ್ಲಿ ಅಪಾರ ಅವಕಾಶಗಳಿವೆ ಎಂದು ಅವರು ತಿಳಿಸಿದರು.

ಬೆಂಗಳೂರಿನ ಡೆಸಾಪೆಕ್ಸ್ ಸಂಸ್ಥೆಯ ಮುಖ್ಯಸ್ಥ ಶ್ರೀನಿಧಿ ಹುನಗುಂದ ಮಾತನಾಡಿ, ಸೃಜನಾತ್ಮಕ ಕಲ್ಪನೆಗಳನ್ನು ಸಾಕಾರಗೊಳಿಸಿಕೊಳ್ಳಲು ಔದ್ಯಮಿಕ ಕ್ಷೇತ್ರದಲ್ಲಿ ವಿಪುಲ ಅವಕಾಶಗಳಿದ್ದು ವಿದ್ಯಾರ್ಥಿಗಳು ಈ ಕ್ಷೇತ್ರದಲ್ಲಿ ಗಮನಹರಿಸಬೇಕು ಎಂದು ಸಲಹೆ ನೀಡಿದರು.

ಕೆಎಲ್ಎಸ್ ಸಂಸ್ಥೆಯ ಮುಖ್ಯಸ್ಥ ಪ್ರದೀಪ ಸಾವ್ಕಾರ ಅಧ್ಯಕ್ಷತೆ ವಹಿಸಿದ್ದರು. ಕರ್ನಾಟಕ ಸರ್ಕಾರದ ವಿಶನ್ ಗ್ರೂಪ್ ಆನ್ ಸೈನ್ಸ್ ಟೆಕ್ನಾಲಜಿಯ 20 ಲಕ್ಷ ರೂಪಾಯಿ ಅನುದಾನದಲ್ಲಿ ನಿರ್ಮಿಸಲಾದ ವೈಬ್ರೇಶನ್ ಪ್ರಯೋಗಾಲಯವನ್ನು ಹಾಗೂ ಸ್ಪಿಕ್ ಮೆಕೆ ಸಾಂಸ್ಕೃತಿಕ ಘಟಕ ಉದ್ಘಾಟಿಸಲಾಯಿತು.

ಕೆಎಲ್ಎಸ್ ಉಪಾಧ್ಯಕ್ಷರಾದ ಆರ್.ಬಿ. ಭಂಡಾರೆ, ಡಿ.ವಿ. ಕುಲಕರ್ಣಿ, ಕಾರ್ಯದರ್ಶಿ ಎಸ್.ವಿ. ಗಣಾಚಾರಿ ಇದ್ದರು.

ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷ ವಿನಾಯಕ ಲೋಕುರ ಸ್ವಾಗತಿಸಿದರು. ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ವಂದಿಸಿದರು.



ಹಳಿಯಾಳದ ಕೆಎಲ್ಎಸ್ ವಿಡಿಐಟಿ ಮಹಾವಿದ್ಯಾಲಯದಲ್ಲಿ ಸಾಂಸ್ಕೃತಿಕ ಘಟಕವನ್ನು ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಉದ್ಘಾಟಿಸಿದರು. ಶ್ರೀನಿಧಿ ಹುನಗುಂದ, ಪ್ರದೀಪ ಸಾವ್ಕಾರ ಇತರರಿದ್ದರು.

# ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ಮುಂಚೂಣಿಯಲ್ಲಿರುವ ಕೆಎಲ್‌ಎಸ್ ವಿಡಿಐಟಿ, ಹಳಿಯಾಳ ಸಂಸ್ಥಾಪನಾ ದಿನ

**ಕರಾವಳಿ ಮುಂಜಾವು ವರದಿ**

**ಹಳಿಯಾಳ:** ತಾಂತ್ರಿಕ ಶಿಕ್ಷಣ ಕ್ಷೇತ್ರದಲ್ಲಿ ತನ್ನದೇ ಆದ ಕೊಡುಗೆ ನೀಡುತ್ತಿರುವ ಉತ್ತರ ಕನ್ನಡ ಜಿಲ್ಲೆಯ ಹೆಮ್ಮೆಯ ತಾಂತ್ರಿಕ ಮಹಾವಿದ್ಯಾಲಯ ವಿಡಿಐಟಿಯ ಸಂಸ್ಥಾಪನಾ ದಿನವನ್ನು ಮೇ 11ರಂದು ಆಚರಿಸಲಾಗುತ್ತಿದೆ. ಈ ಸಮಾರಂಭಕ್ಕೆ ಗೌರವಾನ್ವಿತ ಅತಿಥಿಗಳಾಗಿ ಸಾಫ್ಟ್‌ವೇರ್ ಕ್ಷೇತ್ರದಲ್ಲಿನ ಪ್ರತಿಷ್ಠಿತ ಕಂಪನಿ ಇನ್ಫೋಸಿಸ್‌ನ ಉಪಾಧ್ಯಕ್ಷರಾದ ಶ್ರೀ ವಿನಾಯಕ್ ಹೆಗಡೆ ಆಗಮಿಸಲಿದ್ದಾರೆ. ವಿಡಿಐಟಿಯ ಸಂಸ್ಥಾಪನಾ ದಿನಕ್ಕೆ ಆಗಮಿಸಲಿರುವ ಇವರು ವಿದ್ಯಾರ್ಥಿಗಳಿಗೆ ಔದ್ಯೋಗಿಕ ಕ್ಷೇತ್ರ ಬಯಸುವ ಕೌಶಲ್ಯಗಳ ಕುರಿತಾಗಿ ಅರಿವು ಮೂಡಿಸಲಿದ್ದಾರೆ. ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಮಹಾವಿದ್ಯಾಲಯದ ಮೆಕ್ಯಾನಿಕಲ್ ವಿಭಾಗದ ಮಾಜಿ ವಿದ್ಯಾರ್ಥಿ ಹಾಗು ಯಶಸ್ವಿ ಉದ್ಯಮಿ ಶ್ರೀನಿಧಿ ಹುನಗುಂದ್ ಆಗಮಿಸಲಿದ್ದಾರೆ. ಶ್ರೀನಿಧಿ ಹುನಗುಂದ ಇವರು ಬೆಂಗಳೂರಿನಲ್ಲಿ ಡೆಸಾಪೆಕ್ಸ್ ಎಂಬ ಸಂಸ್ಥೆಯನ್ನು ಮುನ್ನಡೆಸುತ್ತಿದ್ದು, ಎರಡು ನೂರಕ್ಕೂ ಅಧಿಕ ಜನರಿಗೆ ಉದ್ಯೋಗಾವಕಾಶವನ್ನು ನೀಡಿದ್ದಾರೆ, ಇವರಲ್ಲಿ 60 ಪ್ರತಿಶತ ವಿದ್ಯಾರ್ಥಿಗಳು ಮಹಾವಿದ್ಯಾಲಯದಿಂದ ತೇರ್ಗಡೆ ಹೊಂದಿದ್ದಾರೆ. ವಿನಾಯಕ್ ಹೆಗಡೆ ಹಾಗು ಶ್ರೀನಿಧಿ ಹುನ್ಗುಂದ್ ಸಂಸ್ಥಾಪನಾ ದಿನದ ಕೇಂದ್ರ ಬಿಂದುವಾಗಿದ್ದಾರೆ. ಸಂಸ್ಥಾಪನಾ ದಿನದ ಈ ಕಾರ್ಯಕ್ರಮಕ್ಕೆ ಕೆಎಲ್‌ಎಸ್ ಸಂಸ್ಥೆ ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ ಪ್ರದೀಪ್ ಎಸ್. ಸಾವ್ಕಾರ್, ಕೆಎಲ್‌ಎಸ್ ಸಂಸ್ಥೆಯ ಉಪಾಧ್ಯಕ್ಷರುಗಳಾದ ಶ್ರೀ ಆರ್. ಬಿ. ಭಂಡಾರೆ ಮತ್ತು ಶ್ರೀ ಡಿ. ವಿ. ಕುಲಕರ್ಣಿ, ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ ವಿನಾಯಕ ಲೋಕುರ್ ಆಗಮಿಸಲಿದ್ದಾರೆ.

ವಿದ್ಯಾರ್ಥಿಗಳಿಗೆ ಕ್ಯಾಂಪಸ್ ಸಂದರ್ಶನಕ್ಕೆ ಅವಶ್ಯವಿರುವ ತರಬೇತಿಯನ್ನು ಮಹಾವಿದ್ಯಾಲಯವು ನೀಡುತ್ತಾ ಬಂದಿದ್ದು, ಇದರ ಫಲವಾಗಿ ವಿದ್ಯಾರ್ಥಿಗಳು ಹೆಸರಾಂತ ಕಂಪನಿಗಳಾದ ಇನ್ಫೋಸಿಸ್, ವಿಪ್ರೋ, ಕ್ಯಾಪ್ ಜಯ್ಮಿನಿ, ಎಸ್ಸೆನ್ಚರ್, ಟೆಕ್ ಮಹೇಂದ್ರ, ಸ್ಕೋಲಾರ್, ಆಟೋಸ್, ಕೆಪಿಐಟಿ, ಡೇಲ್ಲೋಯಟ್, ಮೈಂಡ್ ಟ್ರಿ, ಜೆಸಿಬಿ, ಐಬಿಎಂ, ಟಿಸಿಎಸ್, ಹಿಟಾಚಿ, ಎಚ್‌ಸಿಎಲ್, ಗ್ಲೋ ಟಚ್, ಫಿಸಿಕ್ಸ್ ಮೋಟರ್ಸ್ ಮುಂತಾದವುಗಳಲ್ಲಿ ಆಯ್ಕೆಯಾಗಿದ್ದಾರೆ. ಕರ್ನಾಟಕ ರಾಜ್ಯ ಸರ್ಕಾರದ ಅಂಗ ಸಂಸ್ಥೆಯಾದ ಕೆ-ಟೆಕ್ ನೈನ್ ಮಹಾವಿದ್ಯಾಲಯದ ವಿದ್ಯಾರ್ಥಿಗಳ ಸಮಾಜೋಪಯೋಗಿ ಯೋಜನಾ ಕಾರ್ಯಗಳಿಗೆ 25 ಲಕ್ಷಕ್ಕೂ ಅಧಿಕ ಧನಸಹಾಯವನ್ನು ನೀಡಿದೆ. ವಿದ್ಯಾರ್ಥಿಗಳ ಸೃಜನಾತ್ಮಕ ಹಾಗು ಸಮಾಜಪಯೋಗಿ ಯೋಜನಾ ಕಾರ್ಯಗಳಿಗೆ ವಿಜನ್ ಗ್ರೂಪ್ ಆನ್ ಸೈನ್ಸ್ ಅಂಡ್ ಟೆಕ್ನಾಲಜಿ ಮತ್ತು ಕರ್ನಾಟಕ ರಾಜ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಮಂಡಳಿಯು ಧನಸಹಾಯ ನೀಡಿ ಪುರಸ್ಕರಿಸಿದೆ. ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದ ಕೌಶಲ್ಯಗಳನ್ನು ನೀಡಲು ಮತ್ತು ಇಂಟ್ರನ್ಶಿಪ್ ಸೌಲಭ್ಯಗಳನ್ನು ಹೊಂದಲು ಮಹಾವಿದ್ಯಾಲಯವು ಪ್ರತಿಷ್ಠಿತ ಕಂಪನಿಗಳಾದ ಹೆಚ್‌ಸಿಎಲ್, ಎಚ್‌ಎಲ್, ಟೊಯೋಟಾ, ಟಾಟಾ ಟೆಕ್ನಾಲಜೀಸ್, ದೇಶಪಾಂಡೆ ಸ್ಟಾರ್ಟ್ ಅಪ್, ಎ ಡಬ್ಲ್ಯೂ ಎಸ್ ಅಕಾಡೆಮಿ, ಬ್ಲೂಪ್ರಿಸ್ಮ್ ಅಕಾಡೆಮಿ, ಸಿಸ್ಕೋ, ಎಜು ಸ್ಕಿಲ್ಸ್ ಮುಂತಾದವುಗಳೊಂದಿಗೆ ಒಡಂಬಡಿಕೆಯನ್ನು ಮಾಡಿಕೊಂಡಿದೆ.

ಮಹಾವಿದ್ಯಾಲಯವು ವಿದ್ಯಾರ್ಥಿಗಳಿಗೆ ನೀಡುತ್ತಿರುವ ಗುಣಮಟ್ಟದ ಶಿಕ್ಷಣ ಮತ್ತು ಕಲಿಕೆಗೆ ಪೂರಕವಾಗಲು ಒದಗಿಸಿರುವ ಸೌಲಭ್ಯಗಳನ್ನು ಗುರುತಿಸಿ ರಾಷ್ಟ್ರೀಯ ಮೌಲ್ಯಮಾಪನ ಮತ್ತು ಮಾನ್ಯತಾ ಮಂಡಳಿ (ನ್ಯಾಕ್) ಯು ಮೊದಲನೇ ಅವತರಣಿಕೆಯಲ್ಲಿ "ಎ" ಶ್ರೇಣಿಯನ್ನು ನೀಡಿರುವುದು ಸಾಧನೆಗೆ ಹಿಡಿದ ಕೈಗನ್ನಡಿಯಾಗಿದೆ. ನವದೆಹಲಿಯ ಎಜುಸ್ಕಿಲ್ ಸಂಸ್ಥೆಯು ಶಿಕ್ಷಣ ಕ್ಷೇತ್ರದಲ್ಲಿನ ಗಣನೀಯ ಸಾಧನೆಗಾಗಿ, ಮಹಾವಿದ್ಯಾಲಯವನ್ನು ಸನ್ಮಾನಿಸಿದೆ .

ಮಹಾವಿದ್ಯಾಲಯದ ಇಕೋ ಕ್ಲಬ್ ಮತ್ತು ಎನ್‌ಎಸ್‌ಎಸ್ ಘಟಕವು ಪರಿಸರ ಸಂರಕ್ಷಣಾ ಕಾರ್ಯದಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದು ಪ್ಲಾಸ್ಟಿಕ್ ಮುಕ್ತ ಕ್ಯಾಂಪಸ್ಸನ್ನಾಗಿ ಮಾಡಿದೆ. ನವೀಕರಿಸಬಹುದಾದ ಶಕ್ತಿಯ ಮೂಲಗಳಲ್ಲೊಂದಾದ ಸೌರಶಕ್ತಿಯನ್ನು ಸಮರ್ಪಕವಾಗಿ ಬಳಕೆ ಮಾಡಿಕೊಳ್ಳಲು ಮಹಾವಿದ್ಯಾಲಯದ ಮೇಲ್ಛಾವಣಿಯಲ್ಲಿ 200 ಕಿಲೋ ವ್ಯಾಟ್ ಸಾಮರ್ಥ್ಯದ ಸೌರ ವಿದ್ಯುತ್ ಶಕ್ತಿ ಘಟಕವನ್ನು ಸ್ಥಾಪಿಸಲಾಗಿದ್ದು, ಮಹಾವಿದ್ಯಾಲಯದ 70 ಪ್ರತಿಶತ ವಿದ್ಯುತ್ ಬೇಡಿಕೆಯನ್ನು ಈ ಘಟಕವು ಪೂರೈಸುತ್ತಿದೆ. ಅಷ್ಟೇ ಅಲ್ಲದೆ ಈ ಘಟಕವು ವಾತಾವರಣದಲ್ಲಿನ ಇಂಗಾಲದ ಡೈಯಾಕ್ಸೈಡ್ ಪ್ರಮಾಣವನ್ನು ಸಹ ತಗ್ಗಿಸಿದೆ.

ಒಟ್ಟಿನಲ್ಲಿ ಹತ್ತು ಹಲವು ಕಾರ್ಯಕ್ರಮಗಳ ಮೂಲಕ ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಶ್ರಮಿಸುತ್ತಿರುವ ವಿಡಿಐಟಿ, ಉತ್ತರ ಕನ್ನಡ ಜಿಲ್ಲೆಯ ಜನರ ಹೆಮ್ಮೆಯಾಗಿದ್ದು ತನ್ನ ಸಂಸ್ಥಾಪನಾ ದಿನವನ್ನು ಆಚರಿಸಿಕೊಳ್ಳಲು ಅಣಿಯಾಗುತ್ತಿದೆ.



# ಕೆಎಲ್‌ಎಸ್‌ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ



**ಕರಾವಳಿ ಮುಂಜಾವು ವರದಿ**

**ಹಳಿಯಾಳ:** ವಿದ್ಯಾರ್ಥಿಗಳು ಸತತ ಪರಿಶ್ರಮ ಹಾಗು ಸಮರ್ಪಣಾ ಭಾವದಿಂದ ಯಶಸ್ವಿ ಜೀವನ ಹೊಂದುವಂತೆ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಕರೆ ನೀಡಿದರು.

ಅವರು ಪಟ್ಟಣದ ಕೆಎಲ್‌ಎಸ್‌ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು

ವಿದ್ಯಾರ್ಥಿಗಳು ಉದ್ಯಮ ಕ್ಷೇತ್ರ ಬಯಸುವ ಕೌಶಲ್ಯವನ್ನು ಹೊಂದಿದಲ್ಲಿ ಅಪಾರ ಉದ್ಯೋಗವಕಾಶಗಳಿವೆ ಎಂದರು

ಹಚ್ಚ ಹಸಿರಿನ ಪರಿಸರದಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ವಿಡಿಐಟಿಯ ಪರಿಶ್ರಮವನ್ನು ಶ್ಲಾಘಿಸಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆಎಸ್‌ಎಲ್ ಸಂಸ್ಥೆಯ ಮುಖ್ಯಸ್ಥರಾದ ಪ್ರದೀಪ್ ಸಾವ್ಕಾರ್ ಕಳೆದ 20 ವರ್ಷಗಳಿಂದ ವಿ ಡಿ ಐಟಿಯು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡುತ್ತಿರುವುದು ಸಂತಸ ತಂದಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವೇದಿಕೆ ಮೇಲೆ ಕೆಎಲ್‌ಎಸ್‌ನ ಉಪಾಧ್ಯಕ್ಷರುಗಳಾದ ಆರ್. ಬಿ.ಭಂಡಾರೆ, ಡಿ. ವಿ. ಕುಲಕರ್ಣಿ, ಕಾರ್ಯದರ್ಶಿಗಳಾದ ಎಸ್. ವಿ. ಗಣಾಚಾರಿ ಉಪಸ್ಥಿತರಿದ್ದರು.

ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರಾದ ವಿನಾಯಕ ಲೋಕೂರ್ ಸಭಿಕರನ್ನು ಸ್ವಾಗತಿಸಿದರು. ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ವಂದಿಸಿದರು.

# ಇನ್ಫೋಸಿಸ್ ಉಪಾಧ್ಯಕ್ಷರೊಂದಿಗೆ ವಿದ್ಯಾರ್ಥಿಗಳ ಸಂವಾದ

**ಹಳಿಯಾಳ** : ಕೃತಕ ಬುದ್ಧಿಮತ್ತೆ ಕೈಗಾರಿಕಾ ಕ್ಷೇತ್ರದ ಎಲ್ಲ ವಲಯಗಳಲ್ಲೂ ಹೊಸ ಕ್ರಾಂತಿಯನ್ನು ಉಂಟು ಮಾಡಿದೆ ಎಂದು ವಿನಾಯಕ ಹೆಗಡೆ ಹೇಳಿದರು.



ಕೆಎಲ್ಎಸ್ ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ಅಂಗವಾಗಿ ಮೇ 11ರಂದು ಖ್ಯಾತ ಸಾಫ್ಟ್‌ವೇರ್ ಸಂಸ್ಥೆಯಾದ ಇನ್ಫೋಸಿಸ್‌ನ ಉಪಾಧ್ಯಕ್ಷ ವಿನಾಯಕ ಹೆಗಡೆ ಆಗಮಿಸಿದ್ದರು. ಈ ಸಂದರ್ಭದಲ್ಲಿ ಸ್ಥಳೀಯ ಪ್ರೌಢಶಾಲಾ, ಪದವಿಪೂರ್ವ, ಪದವಿ ವಿದ್ಯಾಲಯಗಳ ವಿದ್ಯಾರ್ಥಿಗಳೊಂದಿಗೆ ವಿನಾಯಕ ಹೆಗಡೆ ಅವರು ಸಂವಾದ ನಡೆಸಿದರು.

ವಿದ್ಯಾರ್ಥಿಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸುತ್ತ, ಕೃತಕ ಬುದ್ಧಿಮತ್ತೆಯ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಚಾಟ್ ಜಿಪಿಟಿ ತಂತ್ರಾಂಶವು ಸಾಫ್ಟ್‌ವೇರ್ ಕ್ಷೇತ್ರದಲ್ಲಿ ಇಂದು ಮಹತ್ತರ ಪಾತ್ರ ವಹಿಸುತ್ತಿದೆ ಎಂದು ಹೇಳಿದರು. ಕೃತಕ ಬುದ್ಧಿ ಮತ್ತೆ ಯಿಂದ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಕೊಂಚಮಟ್ಟಿಗೆ ಕಡಿಮೆಯಾಗಿದೆ ಎಂದು ಹೇಳಿದರು.

ವಿದ್ಯಾರ್ಥಿಗಳು ಕೈಗಾರಿಕಾ ಕ್ಷೇತ್ರ ಬಯಸುವ ಕೌಶಲ್ಯಗಳನ್ನು ಹೊಂದಿದ್ದಲ್ಲಿ ಹೆಸರಾಂತ ಕಂಪನಿಗಳಲ್ಲಿ ಉದ್ಯೋಗಾವಕಾಶಗಳು ಲಭ್ಯವಿದೆ. ಇನ್ಫೋಸಿಸ್ ಕೇವಲ ಸಾಫ್ಟ್‌ವೇರ್ ಕ್ಷೇತ್ರಕ್ಕೆ ಸೀಮಿತವಾಗಿರದೆ ಸೆಮಿಕಂಡಕ್ಟರ್ ಕ್ಷೇತ್ರದಲ್ಲೂ ದಾಪುಗಾಲು ಇಡುತ್ತಿದೆ ಎಂದು ಉತ್ತರಿಸಿದರು. ಕಾರ್ಯಕ್ಷೇತ್ರದಲ್ಲಿನ ಒತ್ತಡ ನಿರ್ವಹಣೆಗೆ ದುಶ್ಚಟಗಳಿಗೆ ಬಲಿಯಾಗದೆ, ಯೋಗ ಆಧ್ಯಾತ್ಮದಂತ ಮಾರ್ಗವನ್ನು ಅನುಸರಿಸುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದ ಅವರು, ಮಾಡುವ ಕೆಲಸವನ್ನು ಕ್ರಿಯಾಶೀಲಾತ್ಮಕ ಹಾಗೂ ವಿಭಿನ್ನವಾಗಿ ಇನ್ಫೋಸಿಸ್ ಮಾಡುತ್ತಿರುವುದರಿಂದ ಮಾರುಕಟ್ಟೆಯಲ್ಲಿ ದಿಗ್ಗಜ ಸಂಸ್ಥೆಯಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಮೂಲತಃ ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಬಗ್ಗೋಣ ಊರಿನವರಾದ ವಿನಾಯಕ ಹೆಗಡೆ, ತಾವು ಸಹಿತ ಕನ್ನಡ ಮಾಧ್ಯಮದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಶಿಕ್ಷಣ ಪಡೆದು ಇಂದು ಈ ಮಟ್ಟಕ್ಕೆ ಬೆಳೆದಿದ್ದು, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಸತತ ಪರಿಶ್ರಮ ಪಟ್ಟಲ್ಲಿ ಯಶಸ್ಸಿನ ಹಾದಿ ಸುಲಭವಾಗುವುದೆಂದು ಹೇಳಿದರು.ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಕೆಸರೊಳ್ಳಿ, ವಿವಿಡಿ ಸ್ಕೂಲ್ ಆಫ್ ಎಕ್ಸಲೆನ್ಸ್, ಸರ್ಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆ ಜವಳಿಗಲ್ಲಿ, ಸರಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಹಾವಗಿ, ಕೆಎಲ್ಎಸ್ ಬಿಸಿಎ ಕಾಲೇಜು ಹಾಗೂ ವಿಡಿಐಟಿ ಮಹಾವಿದ್ಯಾಲಯದ 50ಕ್ಕೂ ಅಧಿಕ ವಿದ್ಯಾರ್ಥಿಗಳು ವಿನಾಯಕ ಹೆಗಡೆ ಅವರೊಂದಿಗೆ ಸಂವಾದ ನಡೆಸಿದರು.ಪ್ರೊ.ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್ ಮತ್ತು ಪ್ರೊ ರಾಕೇಶ್ ಪಾಟೀಲ್ ಕಾರ್ಯಕ್ರಮವನ್ನು ಸಂಯೋಜಿಸಿದ್ದರು ಎಂದು ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ ತಿಳಿಸಿದ್ದಾರೆ.

Hosadigantha Kannada Daily Printed & Published by P.S.Prakash on behalf of Jnanabharathi Prakashana Limite
Hubballi -580030, Published at Joshi Chambers, 2nd Floor, Near R.M.Joshi Petrol pump, Lamingto

### ಸತತ ಪರಿಶ್ರಮ-ಸಮರ್ಪಣಾ ಭಾವದಿಂದ ಜೀವನದಲ್ಲಿ ಹೊಂದಬೇಕು ಯಶಸ್ಸು: ವಿನಾಯಕ ಹೆಗಡೆ

# ಹಳಿಯಾಳ: ವಿಡಿಐಟಿ ಸಂಸ್ಥಾಪನಾ ದಿನಾಚರಣೆ

■ **ಉದಯವಾಣಿ ಸಮಾಚಾರ**

**ಹಳಿಯಾಳ:** ವಿದ್ಯಾರ್ಥಿಗಳು ಸತತ ಪರಿಶ್ರಮ ಹಾಗೂ ಸಮರ್ಪಣಾ ಭಾವದಿಂದ ಯಶಸ್ವಿ ಜೀವನ ಹೊಂದಬೇಕು. ವಿದ್ಯಾಭ್ಯಾಸದ ಜತೆಗೆ ಆಧುನಿಕತೆಗೆ ತಕ್ಕಂತೆ ನೂತನ ಕೌಶಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದು ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಹೇಳಿದರು.



ಹಳಿಯಾಳ: ವಿಡಿಐಟಿ ಮಹಾವಿದ್ಯಾಲಯದ ಸಂಸ್ಥಾಪಕ ದಿನಾಚರಣೆಯಲ್ಲಿ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಮಾತನಾಡಿದರು.

ಪಟ್ಟಣದ ಕೆಎಲ್ಎಸ್ ವಿಡಿಐಟಿ ಮಹಾವಿದ್ಯಾಲಯ ಸಂಸ್ಥಾಪನಾ ದಿನಾಚರಣೆಯಲ್ಲಿ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು ವಿದ್ಯಾರ್ಥಿಗಳು ಉದ್ಯಮ ಕ್ಷೇತ್ರ ಬಯಸುವ ಕೌಶಲ್ಯ ಹೊಂದಿದಲ್ಲಿ ಅಪಾರ ಉದ್ಯೋಗಾವಕಾಶಗಳಿವೆ ಎಂದು ಹೇಳಿದರು. ಔದ್ಯೋಗಿಕ ಜೀವನದಲ್ಲಿ ಸಂಪತ್ತನ್ನು ಗಳಿಸುವುದರೊಂದಿಗೆ ಸಮಾಜೋಪಯೋಗಿ ಕಾರ್ಯಗಳಲ್ಲೂ ತಮ್ಮನ್ನು ತೊಡಗಿಸಿಕೊಳ್ಳಬೇಕು. ಹಚ್ಚ ಹಸಿರಿನ ಪರಿಸರದಲ್ಲಿ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ವಿಡಿಐಟಿಯ ಪರಿಶ್ರಮ ಶ್ಲಾಘಿಸಿದರು. ಅತಿಥಿಗಳಾದ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ, ಯಶಸ್ವಿ ಯುವ ಉದ್ಯಮಿ, ಬೆಂಗಳೂರಿನಲ್ಲಿ ಡೆಲ್ಟಾಪೆಕ್ಸ್ ಸಂಸ್ಥೆ ಮುನ್ನಡೆಸುತ್ತಿರುವ ಶ್ರೀನಿಧಿ ಹುನಗುಂದ ಮಾತನಾಡಿ, ಸೃಜನಾತ್ಮಕ ಕಲ್ಪನೆಗಳನ್ನು ಸಾಕಾರಗೊಳಿಸಿಕೊಳ್ಳಲು ಔದ್ಯಮಿಕ ಕ್ಷೇತ್ರದಲ್ಲಿ ವಿಪುಲ ಅವಕಾಶಗಳಿದ್ದು ವಿದ್ಯಾರ್ಥಿಗಳು ಈ ಕ್ಷೇತ್ರದಲ್ಲಿ ಗಮನ ಹರಿಸಬೇಕು ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಕೆಎಲ್ಎಸ್ ಸಂಸ್ಥೆ ಮುಖ್ಯಸ್ಥ ಪ್ರದೀಪ್ ಸಾವ್ಕಾರ್, ಕಳೆದ 20 ವರ್ಷಗಳಿಂದ ವಿಡಿಐಟಿಯು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡುತ್ತಿರುವುದು ಸಂತಸ ತಂದಿದೆ ಎಂದು ಹೇಳಿದರು.

ರಾಜ್ಯ ಸರ್ಕಾರದ ವಿಶನ್ ಗ್ರೂಪ್ ಆನ್ ಸೈನ್ಸ್ ಟೆಕ್ನಾಲಜಿಯ 20 ಲಕ್ಷ ರೂ. ಅನುದಾನದಲ್ಲಿ ತಯಾರಿಸಲಾದ ವೈಬ್ರೇಶನ್ ಪ್ರಯೋಗಾಲಯ, ವಿದ್ಯಾರ್ಥಿಗಳಲ್ಲಿ ಸಾಂಸ್ಕೃತಿಕ ಮತ್ತು ಪಾರಂಪರಿಕ ಅರಿವನ್ನು ಉತ್ತೇಜಿಸುವ ಉದ್ದೇಶದ ಸ್ಪಿಕ್ ಮೆಕೆ ಸಾಂಸ್ಕೃತಿಕ ಘಟಕ ಉದ್ಘಾಟಿಸಲಾಯಿತು.

ಶೈಕ್ಷಣಿಕ, ಸಂಶೋಧನೆ ಮತ್ತು ಕ್ರೀಡಾ ವಿಭಾಗದಲ್ಲಿ ಗಣನೀಯ ಸಾಧನೆ ಮಾಡಿದ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಹಾಗೂ ಪ್ರಾಧ್ಯಾಪಕರಿಗೆ ಪುರಸ್ಕರಿಸಲಾಯಿತು. ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭ ನಡೆಯಿತು. ಎಲೆಕ್ಟ್ರಾನಿಕ್ಸ್ ಆ್ಯಂಡ್ ಕಮ್ಯುನಿಕೇಷನ್ ವಿಭಾಗದ ಕೀರ್ತಿ ಶೇಟ್ ಅತ್ಯುತ್ತಮ ವಿದ್ಯಾರ್ಥಿ ಪುರಸ್ಕಾರ ಪಡೆದರು.

ಕೆಎಲ್ಎಸ್ ಉಪಾಧ್ಯಕ್ಷರಾದ ಆರ್.ಬಿ. ಭಂಡಾರೆ, ಡಿ.ವಿ. ಕುಲಕರ್ಣಿ, ಕಾರ್ಯದರ್ಶಿ ಎಸ್.ವಿ. ಗಣಾಚಾರಿ ಉಪಸ್ಥಿತರಿದ್ದರು. ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷ ವಿನಾಯಕ ಲೋಕುರ್ ಸ್ವಾಗತಿಸಿದರು. ಪ್ರಾಚಾರ್ಯ ಡಾ| ವಿ.ಎ. ಕುಲಕರ್ಣಿ ವಂದಿಸಿದರು. ಡಾ| ಮಹೇಂದ್ರ ದೀಕ್ಷಿತ್, ಡಾ| ವೆಂಕಟೇಶ್, ಪ್ರೊ| ಲಕ್ಷ್ಮೀ ಹಟ್ಟಿಹೋಳಿ, ಡಾ| ಸ್ನೇಹಾ ಕುಲಕರ್ಣಿ, ಪ್ರೊ| ಶ್ರೀಗೌರಿ, ಡಾ| ಮುರಗಯ್ಯ, ಪ್ರೊ| ಬಿ.ಬಿ. ಪಾಟೀಲ್ ಮತ್ತು ಡಾ| ವಿನೋದ್ ನಾಯ್ಕ್ ಕಾರ್ಯಕ್ರಮ ಸಂಯೋಜಿಸಿದ್ದರು.

**ಪರಿಶ್ರಮದಿಂದ ಯಶಸ್ಸು** | ವಿಡಿಐಟಿ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ನಿಮಿತ್ತ ಸಂವಾದ ಕಾರ್ಯಕ್ರಮ

# ಸರ್ಕಾರಿ ಕನ್ನಡ ಮಾಧ್ಯಮ ಶಾಲೆ ಎಂಬ ಕೀಳರಿಮೆ ಬೇಡ

• **ಕನ್ನಡಪ್ರಭ ವಾರ್ತೆ** ಹಳಿಯಾಳ

ಕನ್ನಡ ಮಾಧ್ಯಮದಲ್ಲಿ ಕಲಿತಿದ್ದೇನೆ, ಅದೂ ಸರ್ಕಾರಿ ಶಾಲೆಯಲ್ಲಿ ಎಂಬ ಕೀಳರಿಮೆಯನ್ನು ಯಾವತ್ತೂ ಬೆಳೆಸಿಕೊಳ್ಳಬೇಡಿ, ಸತತ ಪರಿಶ್ರಮಪಟ್ಟರೆ ಯಾವುದೇ ಸಾಧನೆ ಅಸಾಧ್ಯವಾದುದಲ್ಲ ಎಂದು ಖ್ಯಾತ ಸಾಫ್ಟ್‌ವೇರ್ ಸಂಸ್ಥೆ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಹೇಳಿದರು.

ಪಟ್ಟಣದ ಕೆ.ಎಲ್.ಎಸ್. ಸಂಸ್ಥೆಯ ವಿಡಿಐಟಿ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ನಿಮಿತ್ತ ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಹಳಿಯಾಳ ತಾಲೂಕಿನ ಪ್ರೌಢಶಾಲಾ, ಪದವಿಪೂರ್ವ ಮತ್ತು ಪದವಿ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳೊಂದಿಗೆ ಅವರು ತಮ್ಮ ಅನುಭವ ಹಂಚಿಕೊಂಡರು.

ನಾನು ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಬಗ್ಗೋಣ ಎಂಬ ಪುಟ್ಟ ಗ್ರಾಮದವನು. ನಾನು ಸಹ ಕನ್ನಡ ಮಾಧ್ಯಮದಲ್ಲಿಯೇ ಶಿಕ್ಷಣ ಪಡೆದು ಗ್ರಾಮೀಣ ಭಾಗದಲ್ಲಿಯ ಕಲಿತು, ಈ ಮಟ್ಟಕ್ಕೆ ಬೆಳೆದಿದ್ದೇನೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸತತ ಪರಿಶ್ರಮ ಮಾಡಿದರೆ ಯಶಸ್ಸು ಸಾಧ್ಯ ಎಂದರು. ಆಧುನಿಕ ತಂತ್ರಜ್ಞಾನದ ಬಗ್ಗೆ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆಯು ಕೈಗಾರಿಕಾ ಕ್ಷೇತ್ರದ ಎಲ್ಲ ವಲಯಗಳಲ್ಲಿ ಹೊಸ ಕ್ರಾಂತಿಯನ್ನು ಉಂಟು ಮಾಡಿದೆ. ಆದರೆ ಕೃತಕ ಬುದ್ಧಿಮತ್ತೆಯಿಂದ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗವಕಾಶಗಳು ಕೊಂಚಮಟ್ಟಿಗೆ ಕಡಿಮೆಯಾಗಿದೆ. ವಿದ್ಯಾರ್ಥಿಗಳು ಈ ಆಧುನಿಕ ಕೈಗಾರಿಕಾ ಕ್ಷೇತ್ರ ಬಯಸುವ ಕೌಶಲ್ಯಗಳನ್ನು ಅರಿತಿದ್ದಲ್ಲಿ ಖ್ಯಾತ ಉದ್ದಿಮೆಗಳಲ್ಲಿ ಉದ್ಯೋಗವಕಾಶಗಳನ್ನು ಪಡೆಯಬಹುದು ಎಂದರು.

ಇನ್ಫೋಸಿಸ್ ಸಂಸ್ಥೆಯ ಕೇವಲ ಸಾಫ್ಟ್‌ವೇರ್‌ಕ್ಷೇತ್ರಕ್ಕೆ ಸೀಮಿತವಾಗಿರದೇ ಸೆಮಿಕಂಡಕ್ಟರ್‌ಕ್ಷೇತ್ರದಲ್ಲೂ ಯಶಸ್ವಿಯಾಗಿದೆ ಎಂದರು. ವಿದ್ಯಾರ್ಥಿಗಳು ಹಾಗೂ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗ ಮಾಡುತ್ತಿರುವವರು ಯಾವುದೇ ಕಾರಣಕ್ಕೂ ಒತ್ತಡ ನಿರ್ವಹಣೆಗೆ ದುಶ್ಚಟಗಳಿಗೆ ಬಲಿಯಾಗಬಾರದು. ಯೋಗ, ಆಧ್ಯಾತ್ಮದಂತಹ ಮಾರ್ಗ ಅನುಸರಿಸಬೇಕು. ಇನ್ಫೋಸಿಸ್ ಸಂಸ್ಥೆಯು ತಾನು ಮಾಡುತ್ತಿರುವ ಕೆಲಸವನ್ನು ಕ್ರಿಯಾತ್ಮಕವಾಗಿ ಹಾಗೂ ವಿಭಿನ್ನವಾಗಿ ಮಾಡುತ್ತಿರುವುದರಿಂದ ಮಾರುಕಟ್ಟೆಯಲ್ಲಿ ದಿಗ್ಗಜ ಸಂಸ್ಥೆಯಾಗಿ ಬೆಳೆದಿದೆ ಎಂದರು. ಸಂವಾದದಲ್ಲಿ ಕೆಸರೊಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ವಿವಿಡಿ ಸ್ಕೂಲ್ ಆಫ್ ಎಕ್ಸಲೆನ್ಸ್, ಸರ್ಕಾರಿ ಹೆಣ್ಣು ಮಕ್ಕಳ ಶಾಲೆ ಹಳಿಯಾಳ, ಹವಗಿ ಸರ್ಕಾರಿ ಡಿಗ್ರಿ ಕಾಲೇಜು ಮತ್ತು ಕೆ.ಎಲ್.ಎಸ್. ಸಂಸ್ಥೆಯ ಬಿಸಿಎ ಮತ್ತು ವಿಡಿಐಟಿ ಮಹಾವಿದ್ಯಾಲಯದ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಂಡಿದ್ದರು. ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ, ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ, ಪ್ರೊ. ರಾಕೇಶ್ ಪಾಟೀಲ ಇದ್ದರು.



KP

ಯಲ್ಲಾಪುರ ಪಟ್ಟಣದ ಕೆ.ಎಲ್.ಎಸ್. ಸಂಸ್ಥೆಯ ವಿಡಿಐಟಿ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ನಿಮಿತ್ತ ಆಯೋಜಿಸಿದ ಸಂವಾದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೊಂದಿಗೆ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಚರ್ಚಿಸಿದರು.

- ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸತತ ಪರಿಶ್ರಮ ಮಾಡಿದರೆ ಯಶಸ್ಸು ಸಾಧ್ಯ
- ವಿದ್ಯಾರ್ಥಿಗಳು ಹಾಗೂ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗ ಮಾಡುತ್ತಿರುವವರು ಯಾವುದೇ ಕಾರಣಕ್ಕೂ ಒತ್ತಡ ನಿರ್ವಹಣೆಗೆ ದುಶ್ಚಟಗಳಿಗೆ ಬಲಿಯಾಗಬಾರದು

## ಕನ್ನಡಪ್ರಭ

**ಪರಿಶ್ರಮದಿಂದ ಯಶಸ್ಸು** | ವಿಡಿಐಟಿ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ನಿಮಿತ್ತ ಸಂವಾದ ಕಾರ್ಯಕ್ರಮ

ಸರ್ಕಾರಿ ಕನ್ನಡ ಮಾಧ್ಯಮ ಶಾಲೆ ಎಂಬ ಕೀಳರಿಮೆ ಬೇಡ

• **ಕನ್ನಡಪ್ರಭ ವಾರ್ತೆ** ಹಳಿಯಾಳ

ಕನ್ನಡ ಮಾಧ್ಯಮದಲ್ಲಿ ಕಲಿತಿದ್ದೇನೆ, ಅದೂ ಸರ್ಕಾರಿ ಶಾಲೆಯಲ್ಲಿ ಎಂಬ ಕೀಳರಿಮೆಯನ್ನು ಯಾವತ್ತೂ ಬೆಳೆಸಿಕೊಳ್ಳಬೇಡಿ, ಸತತ ಪರಿಶ್ರಮಪಟ್ಟರೆ ಯಾವುದೇ ಸಾಧನೆ ಅಸಾಧ್ಯವಾದುದಲ್ಲ ಎಂದು ಖ್ಯಾತ ಸಾಫ್ಟ್‌ವೇರ್ ಸಂಸ್ಥೆ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಹೇಳಿದರು.

ಪಟ್ಟಣದ ಕೆ.ಎಲ್.ಎಸ್. ಸಂಸ್ಥೆಯ ವಿಡಿಐಟಿ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ನಿಮಿತ್ತ ಆಯೋಜಿಸಿದ್ದ ಸಂವಾದ ಕಾರ್ಯಕ್ರಮದಲ್ಲಿ ಹಳಿಯಾಳ ತಾಲೂಕಿನ ಪ್ರೌಢಶಾಲಾ, ಪದವಿಪೂರ್ವ ಮತ್ತು ಪದವಿ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳೊಂದಿಗೆ ಅವರು ತಮ್ಮ ಅನುಭವ ಹಂಚಿಕೊಂಡರು.

ನಾನು ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಬಗ್ಗೋಣ ಎಂಬ ಪುಟ್ಟ ಗ್ರಾಮದವನು. ನಾನು ಸಹ ಕನ್ನಡ ಮಾಧ್ಯಮದಲ್ಲಿಯೇ ಶಿಕ್ಷಣ ಪಡೆದು ಗ್ರಾಮೀಣ ಭಾಗದಲ್ಲಿಯ ಕಲಿತು, ಈ ಮಟ್ಟಕ್ಕೆ ಬೆಳೆದಿದ್ದೇನೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸತತ ಪರಿಶ್ರಮ ಮಾಡಿದರೆ ಯಶಸ್ಸು ಸಾಧ್ಯ ಎಂದರು. ಆಧುನಿಕ ತಂತ್ರಜ್ಞಾನದ ಬಗ್ಗೆ ಮಾತನಾಡಿದ ಅವರು, ಕೃತಕ ಬುದ್ಧಿಮತ್ತೆಯು ಕೈಗಾರಿಕಾ ಕ್ಷೇತ್ರದ ಎಲ್ಲ ವಲಯಗಳಲ್ಲಿ ಹೊಸ ಕ್ರಾಂತಿಯನ್ನು ಉಂಟು ಮಾಡಿದೆ. ಆದರೆ ಕೃತಕ ಬುದ್ಧಿಮತ್ತೆಯಿಂದ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗವಕಾಶಗಳು ಕೊಂಚಮಟ್ಟಿಗೆ ಕಡಿಮೆಯಾಗಿದೆ. ವಿದ್ಯಾರ್ಥಿಗಳು ಈ ಆಧುನಿಕ ಕೈಗಾರಿಕಾ ಕ್ಷೇತ್ರ ಬಯಸುವ ಕೌಶಲ್ಯಗಳನ್ನು ಅರಿತಿದ್ದಲ್ಲಿ ಖ್ಯಾತ ಉದ್ದಿಮೆಗಳಲ್ಲಿ ಉದ್ಯೋಗವಕಾಶಗಳನ್ನು ಪಡೆಯಬಹುದು ಎಂದರು.

ಇನ್ಫೋಸಿಸ್ ಸಂಸ್ಥೆಯ ಕೇವಲ ಸಾಫ್ಟ್‌ವೇರ್‌ಕ್ಷೇತ್ರಕ್ಕೆ ಸೀಮಿತವಾಗಿರದೇ ಸೆಮಿಕಂಡಕ್ಟರ್‌ಕ್ಷೇತ್ರದಲ್ಲೂ ಯಶಸ್ವಿಯಾಗಿದೆ ಎಂದರು. ವಿದ್ಯಾರ್ಥಿಗಳು ಹಾಗೂ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗ ಮಾಡುತ್ತಿರುವವರು ಯಾವುದೇ ಕಾರಣಕ್ಕೂ ಒತ್ತಡ ನಿರ್ವಹಣೆಗೆ ದುಶ್ಚಟಗಳಿಗೆ ಬಲಿಯಾಗಬಾರದು. ಯೋಗ, ಆಧ್ಯಾತ್ಮದಂತಹ ಮಾರ್ಗ ಅನುಸರಿಸಬೇಕು. ಇನ್ಫೋಸಿಸ್ ಸಂಸ್ಥೆಯು ತಾನು ಮಾಡುತ್ತಿರುವ ಕೆಲಸವನ್ನು ಕ್ರಿಯಾತ್ಮಕವಾಗಿ ಹಾಗೂ ವಿಭಿನ್ನವಾಗಿ ಮಾಡುತ್ತಿರುವುದರಿಂದ ಮಾರುಕಟ್ಟೆಯಲ್ಲಿ ದಿಗ್ಗಜ ಸಂಸ್ಥೆಯಾಗಿ ಬೆಳೆದಿದೆ ಎಂದರು. ಸಂವಾದದಲ್ಲಿ ಕೆಸರೊಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ವಿವಿಡಿ ಸ್ಕೂಲ್ ಆಫ್ ಎಕ್ಸಲೆನ್ಸ್, ಸರ್ಕಾರಿ ಹೆಣ್ಣು ಮಕ್ಕಳ ಶಾಲೆ ಹಳಿಯಾಳ, ಹವಗಿ ಸರ್ಕಾರಿ ಡಿಗ್ರಿ ಕಾಲೇಜು ಮತ್ತು ಕೆ.ಎಲ್.ಎಸ್. ಸಂಸ್ಥೆಯ ಬಿಸಿಎ ಮತ್ತು ವಿಡಿಐಟಿ ಮಹಾವಿದ್ಯಾಲಯದ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಂಡಿದ್ದರು. ಪ್ರಾಚಾರ್ಯ ಡಾ. ವಿ.ಎ. ಕುಲಕರ್ಣಿ, ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ, ಪ್ರೊ. ರಾಕೇಶ್ ಪಾಟೀಲ ಇದ್ದರು.



KP

ಯಲ್ಲಾಪುರ ಪಟ್ಟಣದ ಕೆ.ಎಲ್.ಎಸ್. ಸಂಸ್ಥೆಯ ವಿಡಿಐಟಿ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ನಿಮಿತ್ತ ಆಯೋಜಿಸಿದ ಸಂವಾದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೊಂದಿಗೆ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಚರ್ಚಿಸಿದರು.

- ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸತತ ಪರಿಶ್ರಮ ಮಾಡಿದರೆ ಯಶಸ್ಸು ಸಾಧ್ಯ
- ವಿದ್ಯಾರ್ಥಿಗಳು ಹಾಗೂ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗ ಮಾಡುತ್ತಿರುವವರು ಯಾವುದೇ ಕಾರಣಕ್ಕೂ ಒತ್ತಡ ನಿರ್ವಹಣೆಗೆ ದುಶ್ಚಟಗಳಿಗೆ ಬಲಿಯಾಗಬಾರದು

UTTARA KANNADA Edition
May 14, 2024 Page No. 01

## ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆಯವರೊಂದಿಗೆ ವಿದ್ಯಾರ್ಥಿಗಳ ಸಂವಾದ

# ಸರ್ಕಾರಿ ಶಾಲೆ ವಿದ್ಯಾರ್ಥಿಗಳಿಗೆ ಕೀಳರಿಮೆ ಬೇಡ

**ಹಳಿಯಾಳ:** ಕನ್ನಡ ಮಾಧ್ಯಮದಲ್ಲಿ ಕಲಿತಿದ್ದೆನೆ ಅದೂ ಸರ್ಕಾರಿ ಶಾಲೆಯಲ್ಲಿ ಎಂಬ ಕೀಳರಿಮೆಯನ್ನು ಯಾವತ್ತೂ ಬೆಳೆಸಿಕೊಳ್ಳಬೇಡಿ. ಸತತ ಪರಿಶ್ರಮ ಪಟ್ಟರೆ ಯಾವುದೇ ಸಾಧನೆ ಅಸಾಧ್ಯವಾದುದಲ್ಲ ಎಂದು ಖ್ಯಾತ ಸಾಫ್ಟವೇರ್ ಸಂಸ್ಥೆ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಹೇಳಿದರು.

ಪಟ್ಟಣದ ಕೆ.ಎಲ್.ಎಸ್ ಸಂಸ್ಥೆಯ ವಿಡಿಐಟಿ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ನಿಮಿತ್ತ ಆಯೋಜಿಸಿದ ಸಂವಾದ ಕಾರ್ಯಕ್ರಮದಲ್ಲಿ ಹಳಿಯಾಳ ತಾಲೂಕಿನ ಪ್ರೌಢಶಾಲಾ, ಪದವಿಪೂರ್ವ ಮತ್ತು ಪದವಿ ಮಹಾವಿದ್ಯಾಲಯಗಳ ವಿದ್ಯಾರ್ಥಿಗಳೊಂದಿಗೆ ಚರ್ಚೆ ನಡೆಸಿ ತಮ್ಮ ಅನುಭವ ಹಂಚಿಕೊಂಡರು.

ನಾನು ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಬಗ್ಗೋಣ ಎಂಬ ಪುಟ್ಟ ಗ್ರಾಮದವನು. ನಾನು ಸಹ ಕನ್ನಡ ಮಾಧ್ಯಮದಲ್ಲಿಯೇ ಶಿಕ್ಷಣ ಪಡೆದು ಗ್ರಾಮೀಣ ಭಾಗದಲ್ಲಿಯ ಕಲಿತು, ಈ ಮಟ್ಟಕ್ಕೆ ಬೆಳೆದಿದ್ದೆನೆ. ಗ್ರಾಮೀಣ ಭಾಗದ ವಿದ್ಯಾರ್ಥಿಗಳು ಸತತ ಪರಿಶ್ರಮಪಟ್ಟರೆ ಯಶಸ್ಸು ಸಾಧ್ಯ ಎಂದರು.

ಆಧುನಿಕ ತಂತ್ರಜ್ಞಾನದ ಬಗ್ಗೆ ಮಾತನಾಡಿದ ಅವರು ಕೃತಕ ಬುದ್ಧಿಮತ್ತೆಯೂ ಕೈಗಾರಿಕಾ ಕ್ಷೇತ್ರದ ಎಲ್ಲಾ ವಲಯಗಳಲ್ಲಿ ಹೊಸ ಕ್ರಾಂತಿಯನ್ನು ಉಂಟು ಮಾಡಿದೆ. ಕೃತಕ ಬುದ್ಧಿಮತ್ತೆಯಿಂದ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗವಕಾಶಗಳು ಕೊಂಚಮಟ್ಟಿಗೆ ಕಡಿಮೆಯಾಗಿದೆ. ವಿದ್ಯಾರ್ಥಿಗಳು ಈ ಆಧುನಿಕ ಕೈಗಾರಿಕಾ ಕ್ಷೇತ್ರ ಬಯಸುವ ಕೌಶಲ್ಯಗಳನ್ನು ಅರಿತಿದ್ದಲ್ಲಿ ಖ್ಯಾತ ಉದ್ದಿಮೆಗಳಲ್ಲಿ ಉದ್ಯೋಗವಕಾಶಗಳನ್ನು ಪಡೆಯಬಹುದು ಎಂದು ಹೇಳಿದರು.


ಪಟ್ಟಣದ ಕೆ.ಎಲ್.ಎಸ್ ಸಂಸ್ಥೆಯ ವಿಡಿಐಟಿ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ನಿಮಿತ್ತ ಆಯೋಜಿಸಿದ ಸಂವಾದ ಕಾರ್ಯಕ್ರಮದಲ್ಲಿ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಅವರು ಚರ್ಚೆ ನಡೆಸಿದರು.

ಇನ್ಫೋಸಿಸ್ ಸಂಸ್ಥೆಯ ಕೇವಲ ಸಾಫ್ಟವೇರ್ ಕ್ಷೇತ್ರಕ್ಕೆ ಸೀಮಿತವಾಗಿರದೇ ಸೆಮಿಕಂಡಕ್ಟರ್ ಕ್ಷೇತ್ರದಲ್ಲೂ ಯಶಸ್ವಿಯಾಗಿದೆ. ವಿದ್ಯಾರ್ಥಿಗಳು ಹಾಗೂ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗವನ್ನು ಮಾಡುತ್ತಿರುವರು ಯಾವುದೇ ಕಾರಣಕ್ಕೂ ಒತ್ತಡ ನಿರ್ವಹಣೆಗೆ ದುಶ್ಚಟಗಳಿಗೆ ಬಲಿಯಾಗದೆ, ಯೋಗ ಆಧ್ಯಾತ್ಮದಂತಹ ಮಾರ್ಗವನ್ನು ಅನುಸರಿಸಬೇಕು. ಇಂದೂ ಇನ್ಫೋಸಿಸ್ ಸಂಸ್ಥೆಯು ತಾನು ಮಾಡುತ್ತಿರುವ ಕೆಲಸವನ್ನು ಕ್ರಿಯಾಶೀಲಾತ್ಮಕವಾಗಿ ಹಾಗೂ ವಿಭಿನ್ನವಾಗಿ ಮಾಡುತ್ತಿರುವುದರಿಂದ ಮಾರುಕಟ್ಟೆಯಲ್ಲಿ ದಿಗ್ಗಜ ಸಂಸ್ಥೆಯಾಗಿ ಬೆಳೆದಿದೆ ಎಂದರು.

ಸಂವಾದದಲ್ಲಿ ಕೆಸರೊಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ವಿ.ವಿ.ಡಿ ಸ್ಕೂಲ್ ಆಪ್ ಎಕ್ಸಲೆನ್ಸ್, ಸರ್ಕಾರಿ ಹೆಣ್ಣು ಮಕ್ಕಳ ಶಾಲೆ ಹಳಿಯಾಳ, ಸರ್ಕಾರಿ ಡಿಗ್ರಿ ಕಾಲೇಜು ಹವಗಿ ಮತ್ತು ಕೆ.ಎಲ್.ಎಸ್ ಸಂಸ್ಥೆಯ ಬಿಸಿಎ ಮತ್ತು ವಿಡಿಐಟಿ ಮಹಾವಿದ್ಯಾಲಯದ 50ಕ್ಕೂ ಹೆಚ್ಚು ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಸಂವಾದದಲ್ಲಿ ಪಾಲ್ಗೊಂಡಿದ್ದರು. ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ, ಪ್ರೊ.ರಜತ್ ಆಚಾರ್ಯ, ಪ್ರೊ.ನವೀನ್ ಹಿರೇಮಠ, ಪ್ರೊ.ರಾಕೇಶ್ ಪಾಟೀಲ ಇದ್ದರು.

CMYK

Karwar Edition

May 14, 2024 Page No. 03

# ಪರಿಶ್ರಮ, ಸಮರ್ಪಣಾ ಭಾವದಿಂದ ಯಶಸ್ಸುಗಳಿಸಿ: ಹೆಗಡೆ

ಸಾಗರ ಸಾಮ್ರಾಟ ಸಮಾಚಾರ



**ಹಳಿಯಾಳ:** ವಿದ್ಯಾರ್ಥಿಗಳು ಸತತ ಪರಿಶ್ರಮ ಹಾಗೂ ಸಮರ್ಪಣಾ ಭಾವದಿಂದ ಯಶಸ್ವಿ ಜೀವನ ಹೊಂದುವಂತೆ ಇನ್ಫೋಸಿಸ್ ಉಪಾಧ್ಯಕ್ಷರಾದ ವಿನಾಯಕ ಹೆಗಡೆ ಕರೆ ನೀಡಿದರು.

ಪಟ್ಟಣದ ಕೆ ಎಲ್ ಎಸ್ ವಿ ಡಿ ಐ ಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನವನ್ನು ಮೇ 11ರಂದು ಸಂಭ್ರಮದಿಂದ ಆಚರಿಸಲಾಯಿತು. ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಶ್ರೀ. ವಿನಾಯಕ ಹೆಗಡೆ ಆಗಮಿಸಿದ್ದರು. ವಿದ್ಯಾರ್ಥಿಗಳು ಉದ್ಯಮ ಕ್ಷೇತ್ರ ಬಯಸುವ ಕೌಶಲ್ಯವನ್ನು ಹೊಂದಿದಲ್ಲಿ ಅಪಾರ ಉದ್ಯೋಗವಕಾಶಗಳಿವೆ ಎಂದು ಹೇಳುದರು. ಔದ್ಯೋಗಿಕ ಜೀವನದಲ್ಲಿ ಸಂಪತ್ತನ್ನು ಗಳಿಸುವುದರೊಂದಿಗೆ ಸಮಾಜಪಯೋಗಿ ಕಾರ್ಯಗಳಲ್ಲೂ ತಮ್ಮನ್ನು ತೊಡಗಿಸಿಕೊಳ್ಳುವಂತೆ ಕರೆ ನೀಡಿದರು. ಹಚ್ಚ ಹಸಿರಿನ ಪರಿಸರದಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ವಿ ಡಿ ಐ ಟಿ ಯ ಪರಿಶ್ರಮ ಶ್ಲಾಘಿಸಿದರು.

ಗೌರವಾನ್ವಿತ ಅತಿಥಿಗಳಾಗಿ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ, ಯಶಸ್ವಿ ಯುವ ಉದ್ಯಮಿ, ಬೆಂಗಳೂರಿನಲ್ಲಿ ಡೆಸಾಪೆಕ್ಸ್ ಸಂಸ್ಥೆಯನ್ನು ಮುನ್ನಡೆಸುತ್ತಿರುವ ಶ್ರೀ. ಶ್ರೀನಿಧಿ ಹುನಗುಂದ ಆಗಮಿಸಿದ್ದರು. ತಮ್ಮ ಔದ್ಯಮಿಕ ಜೀವನದ ಕಿರು ಚಿತ್ರಣ ನೀಡುತ್ತ ಯುವ ಇಂಜಿನಿಯರ್‌ಗಳನ್ನು ಹುರಿದುಂಬಿಸಿದರು. ಸೃಜನಾತ್ಮಕ ಕಲ್ಪನೆಗಳನ್ನು ಸಾಕಾರಗೊಳಿಸಿಕೊಳ್ಳಲು ಔದ್ಯಮಿಕ ಕ್ಷೇತ್ರದಲ್ಲಿ ವಿಪುಲ ಅವಕಾಶಗಳಿದ್ದು ವಿದ್ಯಾರ್ಥಿಗಳು ಈ ಕ್ಷೇತ್ರದಲ್ಲಿ ಗಮನಹರಿಸಬೇಕೆಂದು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆಎಲ್ಎಸ್ ಸಂಸ್ಥೆಯ ಮುಖ್ಯಸ್ಥರಾದ ಶ್ರೀ. ಪ್ರದೀಪ್ ಸಾವ್ಕಾರ್ ಕಳೆದ 20 ವರ್ಷಗಳಿಂದ ವಿ ಡಿ ಐ ಟಿ ಯು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡುತ್ತಿರುವುದು ಸಂತಸ ತಂದಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ವೇದಿಕೆ ಮೇಲೆ ಕೆ ಎಲ್ ಎಸ್ ನ ಉಪಾಧ್ಯಕ್ಷರುಗಳಾದ ಶ್ರೀ. ಆರ್. ಬಿ.ಭಂಡಾರೆ, ಶ್ರೀ.ಡಿ. ವಿ. ಕುಲಕರ್ಣಿ, ಕಾರ್ಯದರ್ಶಿಗಳಾದ ಶ್ರೀ. ಎಸ್. ವಿ. ಗಣಾಚಾರಿ ಉಪಸ್ಥಿತರಿದ್ದರು. ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್ ಸಭೀಕರನ್ನು ಸ್ವಾಗತಿಸಿದರು. ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ವಂದಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ವಿಶನ್ ಗ್ರೂಪ್ ಆನ್ ಸೈನ್ಸ್ ಟೆಕ್ನಾಲಜಿಂಯು 20 ಲಕ್ಷ ರೂಪಾಯಿ ಅನುದಾನದಲ್ಲಿ ತಯಾರಿಸಲಾದ ವೈಬ್ರೇಶನ್ ಪ್ರಯೋಗಲಾಂಯು ಉದ್ಘಾಟಿಸಲಾಯಿತು. ವಿದ್ಯಾರ್ಥಿ ಗಳಲ್ಲಿ ಸಾಂಸ್ಕೃತಿಕ ಮತ್ತು ಪಾರಂಪರಿಕ ಅರಿವನ್ನು ಉತ್ತೇಜಿಸುವ ಉದ್ದೇಶದ ಸ್ಪಿಕ್‌ಮೇಕೆ ಸಾಂಸ್ಕೃತಿಕ ಘಟಕ ಉದ್ಘಾಟಿಸಲಾಯಿತು.ಶೈಕ್ಷಣಿಕ, ಸಂಶೋಧನೆ ಮತ್ತು ಕ್ರೀಡಾ ವಿಭಾಗದಲ್ಲಿ ಗಣನೀಯ ಸಾಧನೆ ಮಾಡಿದ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಪ್ರಾಧ್ಯಾಪಕರನ್ನುಪುರಾಸ್ಕರಿಸಲಾಯಿತು.

ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಆಯೋಜಿಸಲಾಗಿತ್ತು. ಎಲೆಕ್ಟ್ರಾನಿಕ್ಸ್ ಆಂಡ್ ಕಮ್ಯುನಿಕೇಷನ್ ವಿಭಾಗದ ಕುಮಾರಿ. ಕೀರ್ತಿ ಶೇಟ್ ಅತ್ಯುತ್ತಮ ವಿದ್ಯಾರ್ಥಿ ಪುರಸ್ಕಾರ ಪಡೆದರು. ಡಾ. ಮಹೇಂದ್ರ ದೀಕ್ಷಿತ್, ಡಾ. ವೆಂಕಟೇಶ್, ಪ್ರೊ ಲಕ್ಷ್ಮೀ ಹಟ್ಟಿಹೋಳಿ, ಡಾ. ಸ್ನೇಹಾ ಕುಲಕರ್ಣಿ, ಪ್ರೊ, ಶ್ರೀಗೌರಿ, ಡಾ. ಮುರಗಯ್ಯ, ಪ್ರೊ ಬಿ ಬಿ ಪಾಟೀಲ್ ಮತ್ತು ಡಾ. ವಿನೋದ್ ನಾಯ್ಕ್ ಕಾರ್ಯಕ್ರಮ ಸಂಯೋಜಿಸಿದ್ದರು.



# ಕ್ರಿಯಾಶೀಲತೆಯಿಂದ ಇನ್ಫೋಸಿಸ್ ದಿಗ್ಗಜ ಸಂಸ್ಥೆಯಾಗಿದೆ: ಹೆಗಡೆ

**ಸಾಗರ ಸಾಮ್ರಾಟ ಸಮಾಚಾರ**

**ಹಳಿಯಾಳ:** ಕೃತಕ ಬುದ್ಧಿಮತ್ತೆ ಕೈಗಾರಿಕಾ ಕ್ಷೇತ್ರದ ಎಲ್ಲಾ ವಲಯಗಳಲ್ಲೂ ಹೊಸ ಕ್ರಾಂತಿಯನ್ನು ಉಂಟುಮಾಡಿದೆ ಎಂದು ವಿನಾಯಕ ಹೆಗಡೆ ಹೇಳಿದರು. ಕೆಎಲ್ಎಸ್ ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ಅಂಗವಾಗಿ ಮೇ 11 ರಂದು ಖ್ಯಾತ ಸಾಫ್ಟ್‌ವೇರ್ ಸಂಸ್ಥೆಯಾದ ಇನ್ಫೋಸಿಸ್ ನ ಉಪಾಧ್ಯಕ್ಷ ವಿನಾಯಕ ಹೆಗಡೆ ಆಗಮಿಸಿದ್ದರು.

ಈ ಸಂದರ್ಭದಲ್ಲಿ ಸ್ಥಳೀಯ ಪ್ರೌಢಶಾಲಾ, ಪದವಿಪೂರ್ವ, ಪದವಿ ವಿದ್ಯಾಲಯಗಳ ವಿದ್ಯಾರ್ಥಿಗಳೊಂದಿಗೆ ವಿನಾಯಕ ಹೆಗಡೆ ಅವರು ಸಂವಾದ ನಡೆಸಿದರು.

ವಿದ್ಯಾರ್ಥಿಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸುತ್ತ ಕೃತಕ ಬುದ್ಧಿಮತ್ತೆಯ ಆಧಾರದ ಮೇಲೆ ಕಾರ್ಯ ನಿರ್ವಹಿಸುತ್ತಿರುವ ಚಾಟ್ ಜಿಪಿಟಿ ತಂತ್ರಾಂಶವು ಸಾಫ್ಟ್‌ವೇರ್ ಕ್ಷೇತ್ರದಲ್ಲಿ ಇಂದು ಮಹತ್ತರ ಪಾತ್ರ ವಹಿಸುತ್ತಿದೆ ಎಂದು ಹೇಳಿದರು. ಕೃತಕ ಬುದ್ಧಿ ಮತ್ತೆ ಯಿಂದ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಕೊಂಚಮಟ್ಟಿಗೆ ಕಡಿಮೆಯಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಕೈಗಾರಿಕಾ ಕ್ಷೇತ್ರ ಬಯಸುವ ಕೌಶಲ್ಯಗಳನ್ನು ಹೊಂದಿದ್ದಲ್ಲಿ ಹೆಸರಾಂತ ಕಂಪನಿಗಳಲ್ಲಿ ಉದ್ಯೋಗಾವಕಾಶಗಳು ಲಭ್ಯವಿದೆ ಎಂದು ಹೇಳಿದರು. ಇನ್ಫೋಸಿಸ್ ಕೇವಲ ಸಾಫ್ಟ್‌ವೇರ್ ಕ್ಷೇತ್ರಕ್ಕೆ ಸೀಮಿತವಾಗಿರದೆ ಸೆಮಿಕಂಡಕ್ಟರ್ ಕ್ಷೇತ್ರದಲ್ಲೂ ದಾಪುಗಾಲು ಇಡುತ್ತಿದೆ ಎಂದು ಉತ್ತರಿಸಿದರು. ಕಾರ್ಯಕ್ಷೇತ್ರದಲ್ಲಿನ ಒತ್ತಡ ನಿರ್ವಹಣೆಗೆ ದುಶ್ಚಟಗಳಿಗೆ ಬಲಿಯಾಗದೆ, ಯೋಗ ಆಧ್ಯಾತ್ಮದಂತ ಮಾರ್ಗವನ್ನು ಅನುಸರಿಸುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಮಾಡುವ ಕೆಲಸವನ್ನು ಕ್ರಿಯಾಶೀಲಾತ್ಮಕ ಹಾಗೂ ವಿಭಿನ್ನವಾಗಿ ಇನ್ಫೋಸಿಸ್ ಮಾಡುತ್ತಿರುವುದರಿಂದ ಮಾರುಕಟ್ಟೆಯಲ್ಲಿ ದಿಗ್ಗಜ ಸಂಸ್ಥೆಯಾಗಿ ಹೊರಹೊಮ್ಮಿದೆ ಎಂದು ಹೇಳಿದರು.

ಮೂಲತಃ ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಬಗ್ಗೋಣ ಊರಿನವರಾದ ವಿನಾಯಕ ಹೆಗಡೆ, ತಾವು ಸಹಿತ ಕನ್ನಡ ಮಾಧ್ಯಮದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಶಿಕ್ಷಣ ಪಡೆದು ಇಂದು ಈ ಮಟ್ಟಕ್ಕೆ ಬೆಳೆದಿದ್ದು, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಸತತ ಪರಿಶ್ರಮ ಪಟ್ಟಲ್ಲಿ ಯಶಸ್ಸಿನ ಹಾದಿ ಸುಲಭವಾಗುವುದೆಂದು ಹೇಳಿದರು.

ಈ ಸಂವಾದ ಕಾರ್ಯಕ್ರಮದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕೆಸರೊಳ್ಳಿ, ವಿ ವಿ ಡಿ ಸ್ಕೂಲ್ ಆಫ್ ಎಕ್ಸಲೆನ್ಸ್, ಸರಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆ ಜವಳಿ ಗಲ್ಲಿ, ಸರಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಹಾವಗಿ, ಕೆ ಎಲ್ ಎಸ್ ಬಿ ಸಿ ಎ ಕಾಲೇಜು ಹಾಗೂ ವಿಡಿಐಟಿ ಮಹಾವಿದ್ಯಾಲಯದ 50ಕ್ಕೂ ಅಧಿಕ ವಿದ್ಯಾರ್ಥಿಗಳು ವಿನಾಯಕ ಹೆಗಡೆ ಅವರೊಂದಿಗೆ ಸಂವಾದ ನಡೆಸಿದರು.

ಎಲ್ಲಾ ವಿದ್ಯಾಲಯದ ಶಿಕ್ಷಕರು ಈ ಸಂವಾದ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್ ಮತ್ತು ಪ್ರೊ ರಾಕೇಶ್ ಪಾಟೀಲ್ ಕಾರ್ಯಕ್ರಮವನ್ನು ಸಂಯೋಜಿಸಿದ್ದರು ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ತಿಳಿಸಿದ್ದಾರೆ.

sirsi samachar 15-5-20...

# ಸಂಭ್ರಮದಿಂದ ವಿಡಿಐಟಿ ಸಂಸ್ಥಾಪನಾ ದಿನ ಆಚರಣೆ

**ಶಿರಸಿ ಸಮಾಚಾರ ⏭ ಹಳಿಯಾಳ:** ವಿದ್ಯಾರ್ಥಿಗಳು ಸತತ ಪರಿಶ್ರಮ ಹಾಗೂ ಸಮರ್ಪಣಾ ಭಾವದಿಂದ ಯಶಸ್ವಿ ಜೀವನ ಹೊಂದುವಂತೆ ವಿನಾಯಕ ಹೆಗಡೆ ಕರೆ ನೀಡಿದರು. ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನವನ್ನು ಮೇ 11ರಂದು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಇನ್ಫೋಸಿಸ್ ಉಪಾಧ್ಯಕ್ಷ ವಿನಾಯಕ ಹೆಗಡೆ ಆಗಮಿಸಿದ್ದರು. ವಿದ್ಯಾರ್ಥಿಗಳು ಉದ್ಯಮ ಕ್ಷೇತ್ರ ಬಯಸುವ ಕೌಶಲ್ಯವನ್ನು ಹೊಂದಿದಲ್ಲಿ ಅಪಾರ ಉದ್ಯೋಗವಕಾಶಗಳಿವೆ ಎಂದು ಹೇಳಿದರು. ಔದ್ಯೋಗಿಕ ಜೀವನದಲ್ಲಿ ಸಂಪತ್ತನ್ನು ಗಳಿಸುವುದರೊಂದಿಗೆ ಸಮಾಜಪಯೋಗಿ ಕಾರ್ಯಗಳಲ್ಲೂ ತಮ್ಮನ್ನು ತೊಡಗಿಸಿಕೊಳ್ಳುವಂತೆ ಕರೆ ನೀಡಿದರು. ಹಚ್ಚ ಹಸಿರಿನ ಪರಿಸರದಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ವಿಡಿಐಟಿಯ ಪರಿಶ್ರಮವನ್ನು ಶ್ಲಾಘಿಸಿದರು.

ಗೌರವಾನ್ವಿತ ಅತಿಥಿಗಳಾಗಿ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ, ಯಶಸ್ವಿ ಯುವ ಉದ್ಯಮಿ, ಬೆಂಗಳೂರಿನಲ್ಲಿ ಡೆಸಾಪೆಕ್ಸ್ ಸಂಸ್ಥೆಯನ್ನು ಮುನ್ನಡೆಸುತ್ತಿರುವ ಶ್ರೀನಿಧಿ ಹುನಗುಂದ ಆಗಮಿಸಿದ್ದರು. ತಮ್ಮ ಔದ್ಯಮಿಕ ಜೀವನದ ಕಿರು ಚಿತ್ರಣ ನೀಡುತ್ತ ಯುವ ಇಂಜಿನಿಯರ್‌ಗಳನ್ನು ಹುರಿದುಂಬಿಸಿದರು. ಸೃಜನಾತ್ಮಕ ಕಲ್ಪನೆಗಳನ್ನು ಸಾಕಾರಗೊಳಿಸಿಕೊಳ್ಳಲು ಔದ್ಯಮಿಕ ಕ್ಷೇತ್ರದಲ್ಲಿ ವಿಫುಲ ಅವಕಾಶಗಳಿದ್ದು ವಿದ್ಯಾರ್ಥಿಗಳು ಈ ಕ್ಷೇತ್ರದಲ್ಲಿ ಗಮನಹರಿಸಬೇಕೆಂದು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ಕೆಎಲ್‌ಎಸ್ ಸಂಸ್ಥೆಯ ಮುಖ್ಯಸ್ಥ ಪ್ರದೀಪ್ ಸಾವ್ಕಾರ್ ಕಳೆದ 20 ವರ್ಷಗಳಿಂದ ವಿಡಿಐಟಿಯು ಉನ್ನತ ಶಿಕ್ಷಣ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆ ಮಾಡುತ್ತಿರುವುದು ಸಂತಸ ತಂದಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ವೇದಿಕೆ ಮೇಲೆ ಕೆಎಲ್‌ಎಸ್‌ನ ಉಪಾಧ್ಯಕ್ಷರುಗಳಾದ ಆರ್. ಬಿ.ಭಂಡಾರಿ, ಡಿ.ವಿ.ಕುಲಕರ್ಣಿ, ಕಾರ್ಯದರ್ಶಿ ಎಸ್. ವಿ. ಗಣಾಚಾರಿ ಉಪಸ್ಥಿತರಿದ್ದರು. ಮಹಾವಿದ್ಯಾಲಯದ ಆಡಳಿತ ಮಂಡಳಿಯ ಅಧ್ಯಕ್ಷ ವಿನಾಯಕ ಲೋಕುರ್ ಸಭೀಕರನ್ನು ಸ್ವಾಗತಿಸಿದರು. ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ ವಂದಿಸಿದರು.

ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ವಿಶನ್ ಗ್ರೂಪ್ ಆನ್ ಸೈನ್ಸ್ ಟೆಕ್ನಾಲಜಿಯ 20 ಲಕ್ಷ ರೂಪಾಯಿ ಅನುದಾನದಲ್ಲಿ ತಯಾರಿಸಲಾದ ವೈಬ್ರೇಶನ್ ಪ್ರಯೋಗಲಾಯ ಉದ್ಘಾಟಿಸಲಾಯಿತು. ವಿದ್ಯಾರ್ಥಿಗಳಲ್ಲಿ ಸಾಂಸ್ಕೃತಿಕ ಮತ್ತು ಪಾರಂಪರಿಕ ಅರಿವನ್ನು ಉತ್ತೇಜಿಸುವ ಉದ್ದೇಶದ ಸ್ಪಿಕ್ ಮೇಕೆ ಸಾಂಸ್ಕೃತಿಕ ಘಟಕ ಉದ್ಘಾಟಿಸಲಾಯಿತು.ಶೈಕ್ಷಣಿಕ, ಸಂಶೋಧನೆ ಮತ್ತು ಕ್ರೀಡಾ ವಿಭಾಗದಲ್ಲಿ ಗಣನೀಯ ಸಾಧನೆ ಮಾಡಿದ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಹಾಗೂ ಪ್ರಾಧ್ಯಾಪಕರುಗಳಿಗೆ ಪುರಾಸ್ಕರಿಸಲಾಯಿತು.

ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಆಯೋಜಿಸಲಾಗಿತ್ತು. ಎಲೆಕ್ಟ್ರಾನಿಕ್ಸ್ ಅಂಡ್ ಕಮ್ಯುನಿಕೇಷನ್ ವಿಭಾಗದ ಕೀರ್ತಿ ಶೇಟ್ ಅತ್ಯುತ್ತಮ ವಿದ್ಯಾರ್ಥಿ ಪುರಸ್ಕಾರ ಪಡೆದರು. ಡಾ. ಮಹೇಂದ್ರ ದೀಕ್ಷಿತ್, ಡಾ. ವೆಂಕಟೇಶ್, ಪ್ರೊ.ಲಕ್ಷ್ಮೀ ಹಟ್ಟಿಹೋಳಿ, ಡಾ. ಸ್ನೇಹಾ ಕುಲಕರ್ಣಿ, ಪ್ರೊ. ಶ್ರೀಗೌರಿ, ಡಾ. ಮುರಗಯ್ಯ, ಪ್ರೊ ಬಿ ಬಿ ಪಾಟೀಲ್ ಮತ್ತು ಡಾ. ವಿನೋದ್ ನಾಯ್ಕ್ ಕಾರ್ಯಕ್ರಮ ಸಂಯೋಜಿಸಿದ್ದರು.

# ಇನ್ಫೋಸಿಸ್ ಉಪಾಧ್ಯಕ್ಷರೊಂದಿಗೆ ಶಾಲಾ ಕಾಲೇಜು ವಿದ್ಯಾರ್ಥಿಗಳ ಸಂವಾದ

**ಶಿರಸಿ ಸಮಾಚಾರ ⏭ ಹಳಿಯಾಳ:** ಕೃತಕ ಬುದ್ಧಿಮತ್ತೆ ಕೈಗಾರಿಕಾ ಕ್ಷೇತ್ರದ ಎಲ್ಲಾ ವಲಯಗಳಲ್ಲೂ ಹೊಸ ಕ್ರಾಂತಿಯನ್ನು ಉಂಟುಮಾಡಿದೆ ಎಂದು ವಿನಾಯಕ ಹೆಗಡೆ ಹೇಳಿದರು.

ಕೆಎಲ್ಎಸ್ ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ಅಂಗವಾಗಿ ಮೇ 11 ರಂದು ಖ್ಯಾತ ಸಾಫ್ಟ್ವೇರ್ ಸಂಸ್ಥೆಯಾದ ಇನ್ಫೋಸಿಸ್‌ನ ಉಪಾಧ್ಯಕ್ಷ ವಿನಾಯಕ ಹೆಗಡೆ ಆಗಮಿಸಿದ್ದರು. ಈ ಸಂದರ್ಭದಲ್ಲಿ ಸ್ಥಳೀಯ ಪ್ರೌಢಶಾಲಾ, ಪದವಿಪೂರ್ವ, ಪದವಿ ವಿದ್ಯಾಲಯಗಳ ವಿದ್ಯಾರ್ಥಿಗಳೊಂದಿಗೆ ವಿನಾಯಕ ಹೆಗಡೆ ಅವರು ಸಂವಾದ ನಡೆಸಿದರು.

ವಿದ್ಯಾರ್ಥಿಗಳು ಕೇಳಿದ ಪ್ರಶ್ನೆಗಳಿಗೆ ಉತ್ತರಿಸುತ್ತ ಕೃತಕ ಬುದ್ಧಿಮತ್ತೆಯ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಚಾಟ್ ಜಿಪಿಟಿ ತಂತ್ರಾಂಶವು ಸಾಫ್ಟ್ವೇರ್ ಕ್ಷೇತ್ರದಲ್ಲಿ ಇಂದು ಮಹತ್ತರ ಪಾತ್ರ ವಹಿಸುತ್ತಿದೆ ಎಂದು ಹೇಳಿದರು. ಕೃತಕ ಬುದ್ಧಿ ಮತ್ತೆ ಯಿಂದ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಕೊಂಚಮಟ್ಟಿಗೆ ಕಡಿಮೆಯಾಗಿದೆ ಎಂದು ಹೇಳಿದರು. ವಿದ್ಯಾರ್ಥಿಗಳು ಕೈಗಾರಿಕಾ ಕ್ಷೇತ್ರ ಬಯಸುವ ಕೌಶಲ್ಯಗಳನ್ನು ಹೊಂದಿದ್ದಲ್ಲಿ ಹೆಸರಾಂತ ಕಂಪನಿಗಳಲ್ಲಿ ಉದ್ಯೋಗಾವಕಾಶಗಳು ಲಭ್ಯವಿದೆ ಎಂದು ಹೇಳಿದರು. ಇನ್ಫೋಸಿಸ್ ಕೇವಲ ಸಾಫ್ಟ್ವೇರ್ ಕ್ಷೇತ್ರಕ್ಕೆ ಸೀಮಿತ ವಾಗಿರದೆ ಸೆಮಿಕಂಡಕ್ಟರ್ ಕ್ಷೇತ್ರದಲ್ಲೂ ದಾಪುಗಾಲು ಇಡುತ್ತಿದೆ ಎಂದರು. ಕಾರ್ಯಕ್ಷೇತ್ರದಲ್ಲಿನ ಒತ್ತಡ ನಿರ್ವಹಣೆಗೆ ದುಶ್ಚಟಗಳಿಗೆ ಬಲಿಯಾಗದೆ, ಯೋಗ ಆಧ್ಯಾತ್ಮದಂತ ಮಾರ್ಗವನ್ನು ಅನುಸರಿಸುವಂತೆ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು. ಮಾಡುವ ಕೆಲಸವನ್ನು ಕ್ರಿಯಾಶೀಲಾತ್ಮಕ ಹಾಗೂ ವಿಭಿನ್ನವಾಗಿ ಇನ್ಫೋಸಿಸ್ ಮಾಡುತ್ತಿರುವುದರಿಂದ ಮಾರುಕಟ್ಟೆಯಲ್ಲಿ ದಿಗ್ಗಜ ಸಂಸ್ಥೆಯಾಗಿ ಹೊರಹೊಮ್ಮಿದೆ ಎಂದು ಹೇಳಿದರು.



ಮೂಲತಃ ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲೂಕಿನ ಬಗ್ಗೋಣ ಊರಿನವರಾದ ವಿನಾಯಕ ಹೆಗಡೆ, ತಾವು ಸಹಿತ ಕನ್ನಡ ಮಾಧ್ಯಮದಲ್ಲಿ ಗ್ರಾಮೀಣ ಪ್ರದೇಶದಲ್ಲಿ ಶಿಕ್ಷಣ ಪಡೆದು ಇಂದು ಈ ಮಟ್ಟಕ್ಕೆ ಬೆಳೆದಿದ್ದು, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಸತತ ಪರಿಶ್ರಮ ಪಟ್ಟಲ್ಲಿ ಯಶಸ್ಸಿನ ಹಾದಿ ಸುಲಭವಾಗುವುದೆಂದು ಹೇಳಿದರು.

ಈ ಸಂವಾದ ಕಾರ್ಯಕ್ರಮದಲ್ಲಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆ ಕೆಸರೊಳ್ಳಿ, ವಿವಿಡಿ ಸ್ಕೂಲ್ ಆಫ್ ಎಕ್ಸಲೆನ್ಸ್, ಸರಕಾರಿ ಹೆಣ್ಣು ಮಕ್ಕಳ ಪ್ರೌಢಶಾಲೆ ಜವಳಿ ಗಲ್ಲಿ, ಸರಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ ಹಾವಗಿ, ಕೆಎಲ್ಎಸ್ ಬಿಸಿಎ ಕಾಲೇಜು ಹಾಗೂ ವಿಡಿಐಟಿ ಮಹಾವಿದ್ಯಾಲಯದ 50ಕ್ಕೂ ಅಧಿಕ ವಿದ್ಯಾರ್ಥಿಗಳು ವಿನಾಯಕ ಹೆಗಡೆ ಅವರೊಂದಿಗೆ ಸಂವಾದ ನಡೆಸಿದರು.

ಎಲ್ಲಾ ವಿದ್ಯಾಲಯದ ಶಿಕ್ಷಕರು ಈ ಸಂವಾದ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್ ಮತ್ತು ಪ್ರೊ.ರಾಕೇಶ್ ಪಾಟೀಲ್ ಕಾರ್ಯಕ್ರಮವನ್ನು ಸಂಯೋಜಿಸಿದ್ದರು ಎಂದು ಪ್ರಾಚಾರ್ಯ ಡಾ.ವಿ.ಎ.ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ‘ಕೌಶಲ ಇದ್ದಲ್ಲಿ ಉದ್ಯೋಗಾವಕಾಶ ಲಭ್ಯ’

ಪ್ರಜಾವಾಣಿ ವಾರ್ತೆ

**ಹಳಿಯಾಳ:** ‘ಕೃತಕ ಬುದ್ಧಿಮತ್ತೆ ಕೈಗಾರಿಕಾ ಕ್ಷೇತ್ರದ ಎಲ್ಲ ವಲಯಗಳಲ್ಲೂ ಕ್ರಾಂತಿಯನ್ನುಂಟುಮಾಡಿದೆ’ ಎಂದು ಇನ್ಫೋಸಿಸ್‌ನ ಉಪಾಧ್ಯಕ್ಷ ವಿನಾಯಕ ಹೆಗಡೆ ಹೇಳಿದರು.

ಕೆಎಲ್‌ಎಸ್ ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನದ ಅಂಗವಾಗಿ ಈಚೆಗೆ ನಡೆದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಸ್ಥಳೀಯ ಪ್ರೌಢಶಾಲೆ, ಪದವಿಪೂರ್ವ, ಪದವಿ ವಿದ್ಯಾಲಯಗಳ ವಿದ್ಯಾರ್ಥಿಗಳೊಂದಿಗೆ ಅವರು ಸಂವಾದ ನಡೆಸಿದರು.

‘ಕೃತಕ ಬುದ್ಧಿಮತ್ತೆಯ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಚಾಟ್ ಜಿಪಿಟಿ ತಂತ್ರಾಂಶವು ಸಾಫ್ಟ್‌ವೇರ್ ಕ್ಷೇತ್ರದಲ್ಲಿ ಇಂದು ಮಹತ್ತರ ಪಾತ್ರ ವಹಿಸುತ್ತಿದೆ. ಕೃತಕ ಬುದ್ಧಿಮತ್ತೆಯಿಂದಾಗಿ ಕೈಗಾರಿಕಾ ಕ್ಷೇತ್ರದಲ್ಲಿ ಉದ್ಯೋಗಾವಕಾಶಗಳು ಕೊಂಚಮಟ್ಟಿಗೆ ಕಡಿಮೆಯಾಗಿದೆ. ವಿದ್ಯಾರ್ಥಿಗಳು ಕೈಗಾರಿಕಾ ಕ್ಷೇತ್ರ ಬಯಸುವ ಕೌಶಲಗಳನ್ನು ಹೊಂದಿದ್ದಲ್ಲಿ ಹೆಸರಾಂತ ಕಂಪನಿಗಳಲ್ಲಿ ಉದ್ಯೋಗಾವಕಾಶಗಳು ಲಭ್ಯವಿವೆ’ ಎಂದು ಹೇಳಿದರು.



ಹಳಿಯಾಳದ ಕೆಎಲ್‌ಎಸ್ ವಿಡಿಐಟಿ ತಾಂತ್ರಿಕ ವಿದ್ಯಾಲಯದಲ್ಲಿ ಇನ್ಫೋಸಿಸ್ ಕಂಪನಿಯ ಉಪಾಧ್ಯಕ್ಷ ವಿನಾಯಕ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಪ್ರಾಚಾರ್ಯ ವಿ.ಎ. ಕುಲಕರ್ಣಿ ಇದ್ದಾರೆ

ಕಾರ್ಯಕ್ಷೇತ್ರದಲ್ಲಿನ ಒತ್ತಡ ನಿರ್ವಹಣೆಗೆ ದುಶ್ಚಟಗಳಿಗೆ ಬಲಿಯಾಗದೇ, ಯೋಗ ಅಧ್ಯಾತ್ಮದಂಥ ಮಾರ್ಗವನ್ನು ಅನುಸರಿಸುವಂತೆ ವಿದ್ಯಾರ್ಥಿಗಳಿಗೆ ಅವರು ಕಿವಿಮಾತು ಹೇಳಿದರು. ಉತ್ತರ ಕನ್ನಡ ಜಿಲ್ಲೆಯ ಕುಮಟಾ ತಾಲ್ಲೂಕಿನ ಬಗ್ಗೋಣ ಊರಿನವರಾದ ವಿನಾಯಕ ಹೆಗಡೆ, ತಾವು ಸಹ ಗ್ರಾಮೀಣ ಪ್ರದೇಶದಲ್ಲಿ ಕನ್ನಡ ಮಾಧ್ಯಮದಲ್ಲಿ ಶಿಕ್ಷಣ ಪಡೆದು ಇಂದು ಉನ್ನತ ಮಟ್ಟಕ್ಕೆ ಬೆಳೆದಿದ್ದು, ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಸತತ ಪರಿಶ್ರಮ ಪಟ್ಟಲ್ಲಿ ಯಶಸ್ಸಿನ ಹಾದಿ ಸುಲಭವಾಗುವುದು ಎಂದು ವಿವರಿಸಿದರು.

ಕೆಸರೊಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ವಿವಿಡಿ ಸ್ಕೂಲ್ ಆಫ್ ಎಕ್ಸಲೆನ್ಸ್, ಬವಳಿ ಗಲ್ಲಿ ಸರ್ಕಾರಿ ಹೆಣ್ಣುಮಕ್ಕಳ ಪ್ರೌಢಶಾಲೆ, ಹವಗಿ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯ, ಕೆಎಲ್‌ಎಸ್‌ಬಿಸಿಎ ಕಾಲೇಜು ಹಾಗೂ ವಿಡಿಐಟಿ ಮಹಾವಿದ್ಯಾಲಯದ ವಿದ್ಯಾರ್ಥಿಗಳು ಸಂವಾದದಲ್ಲಿ ಪಾಲ್ಗೊಂಡರು. ಪ್ರೊ. ರಜತ್ ಆಚಾರ್ಯ, ಪ್ರೊ. ನವೀನ್ ಹಿರೇಮಠ್, ಪ್ರೊ ರಾಕೇಶ್ ಪಾಟೀಲ್ ಕಾರ್ಯಕ್ರಮವನ್ನು ಸಂಯೋಜಿಸಿದ್ದರು.

# ಪರಿಶ್ರಮದಿಂದ ಯಶಸ್ವಿ ಜೀವನ ಕಟ್ಟಿಕೊಳ್ಳಿ: ಹೆಗಡೆ

**ಹಳಿಯಾಳ:** ವಿದ್ಯಾರ್ಥಿಗಳು ಸತತ ಪರಿಶ್ರಮ ಹಾಗೂ ಸಮರ್ಪಣಾ ಭಾವದಿಂದ ಯಶಸ್ವಿ ಜೀವನ ಕಟ್ಟಿಕೊಳ್ಳಬೇಕು ಎಂದು ಇನ್ಫೋಸಿಸ್ ಉಪಾಧ್ಯಕ್ಷರಾದ ವಿನಾಯಕ ಹೆಗಡೆ ಸಲಹೆ ನೀಡಿದರು.

ಪಟ್ಟಣದ ಕೆಎಲ್‌ಎಸ್ ವಿಡಿಐಟಿ ಹಳಿಯಾಳ ಮಹಾವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಮಡು ಅವರು ಮಾತನಾಡಿ, ವಿದ್ಯಾರ್ಥಿಗಳು ಉದ್ಯಮ ಕ್ಷೇತ್ರ ಬಯಸುವ ಕೌಶಲ್ಯವನ್ನು ಹೊಂದಿದಲ್ಲಿ ಅಪಾರ ಉದ್ಯೋಗವಕಾಶಗಳಿವೆ. ಔದ್ಯೋಗಿಕ ಜೀವನದಲ್ಲಿ ಸಂಪತ್ತು ಗಳಿಸುವುದರೊಂದಿಗೆ ಸಮಾಜಪಯೋಗಿ ಕಾರ್ಯಗಳಲ್ಲೂ ತಮ್ಮನ್ನು ತೊಡಗಿಸಿಕೊಳ್ಳಬೇಕೆಂದು ಸಲಹೆ ನೀಡಿದರು. ಹಸಿರಿನ ಪರಿಸರದಲ್ಲಿ ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ವಿಡಿಐಟಿ ಪರಿಶ್ರಮ ಶ್ಲಾಘನೀಯ ಎಂದರು.

ಅತಿಥಿಗಳಾಗಿ ಆಗಮಿಸಿದ್ದ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ, ಯಶಸ್ವಿ ಯುವ ಉದ್ಯಮಿ, ಬೆಂಗಳೂರಿನಲ್ಲಿ ಡೆಸಾಪೆಕ್ಸ್ ಸಂಸ್ಥೆಯನ್ನು



ಮುನ್ನಡೆಸುತ್ತಿರುವ ಶ್ರೀನಿಧಿ ಹುನಗುಂದ ಮಾತನಾಡಿ, ತಮ್ಮ ಔದ್ಯಮಿಕ ಜೀವನದ ಕಿರುಚಿತ್ರಣ ನೀಡುತ್ತ ಯುವ ಇಂಜಿನಿಯರ್‌ಗಳನ್ನು ಹುರಿದುಂಬಿಸಿದರು.

ಕೆಎಲ್‌ಎಸ್‌ನ ಉಪಾಧ್ಯಕ್ಷ ಆರ್.ಬಿ.ಭಂಡಾರೆ, ಡಿ.ವಿ. ಕುಲಕರ್ಣಿ, ಕಾರ್ಯದರ್ಶಿ ಎಸ್.ವಿ. ಗಣಾಚಾರಿ ವೇದಿಕೆಯಲ್ಲಿದ್ದರು. ವಿನಾಯಕ ಲೋಕುರ್ ಸ್ವಾಗತಿಸಿದರು. ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ವಂದಿಸಿದರು.

ಇದೇ ವೇಳೆ ಕರ್ನಾಟಕ ಸರ್ಕಾರದ ವಿಶನ್ ಗ್ರೂಫ್ ಆನ್ ಸೈನ್ಸ್ ಟೆಕ್ನಾಲಜಿಯ 20 ಲಕ್ಷ ರೂಪಾಯಿ ಅನುದಾನದಲ್ಲಿ ತಯಾರಿಸಲಾದ ವೈಬ್ರೇಶನ್ ಪ್ರಯೋಗಾಲಯ ಉದ್ಘಾಟಿಸಲಾಯಿತು.

ಸ್ಪಿಕ್ ಮೇಕೆ ಸಾಂಸ್ಕೃತಿಕ ಘಟಕ ಉದ್ಘಾಟಿಸಲಾಯಿತು. ಶೈಕ್ಷಣಿಕ, ಸಂಶೋಧನೆ ಮತ್ತು ಕ್ರೀಡಾ ವಿಭಾಗದಲ್ಲಿ ಗಣನೀಯ ಸಾಧನೆ ಮಾಡಿದ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ಹಾಗೂ ಪ್ರಾಧ್ಯಾಪಕರಿಗೆ ಪುರಸ್ಕರಿಸಲಾಯಿತು. ಅಂತಿಮ ವರ್ಷದ ವಿದ್ಯಾರ್ಥಿಗಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಇದೇ ವೇಳೆ ಆಯೋಜಿಸಲಾಗಿತ್ತು.

# KLS VDIT

*Transforming Through Technology*

Haliyal, Uttara Kannada - 581329

Affiliated to VTU | Approved by AICTE | 2f Recognised by UGC

Civil Engg. | Computer Science & Engg. | Computer Science & Engg. (AI&ML)
Electrical & Electronics Engg. | Electronics & Communication Engg. | Mechanical Engg.

All are cordially invited for the celebration of

# Foundation Day

on Saturday, 11th May 2024, 10 a.m.

Chief Guest
**Shri Vinayak Hegde**
Vice President
Infosys

Guest of Honor
**Shri Shreenidhi Hungund**
Head-Engineering Services, Desapex
Proud alumnus of 2013 Batch

President
**Shri P. S. Sawkar**
Chairman, KLS Belagavi

In the august presence of

**Shri R. B. Bhandare**
Vice President, KLS Belagavi

**Shri D. V. Kulkarni**
Vice President, KLS Belagavi

**Shri V. G. Kulkarni**
Secretary, KLS Belagavi

**Shri S. V. Ganachari**
Secretary, KLS Belagavi

**Shri Vinayak Lokur**
Chairman, GC, KLS VDIT

**Esteemed Members of Karnatak Law Society**

'A' Grade Accredited by NAAC

Principal
Staff, Students of KLS VDIT

klsvdit.edu.in

